ಕನ್ನಡಪ್ರಭ
ಶನಿವಾರ 9.05.2026



ಮರ ಉರುಳಿ ಬಿದ್ದು ವಿದ್ಯುತ್ ಕಂಬಗಳು ಧರೆಗೆ

ವಿಜಯಪುರ: ಪಟ್ಟಣ ಸಮೀಪದ ದೊಡ್ಡ ಮುದ್ದೇನ ಹಳ್ಳಿ ಗ್ರಾಮದಲ್ಲಿ ಗುರುವಾರ ಸಂಜೆ ಬೀಸಿದ ಭೀಕರ ಬಿರುಗಾಳಿಗೆ ಬೃಹತ್ ಮರವೊಂದು ಉರುಳಿ ಬಿದ್ದ ಪರಿಣಾಮ, ಸಾಲಾಗಿ 8 ವಿದ್ಯುತ್ ಕಂಬಗಳು ನೆಲ ಸಮಗೊಂಡಿವೆ. ಗ್ರಾಮದಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡು ಕತ್ತಲಲ್ಲಿ ಕಾಲ ಕಳೆಯುವಂತಾಗಿದೆ. ವಿದ್ಯುತ್ ಇಲ್ಲದೆ ಮನೆಯಲ್ಲಿ ಫ್ಯಾನ್‌ಗಳಿಲ್ಲದೆ ಉಸಿರುಕಟ್ಟುವ ವಾತಾವರಣ ನಿರ್ಮಾಣವಾಗಿದೆ. ಕೃಷಿ ಪಂಪ್‌ಸೆಟ್‌ಗಳು ಸ್ಥಗಿತಗೊಂಡು ಬೆಳೆಗಳು ಬಾಡುತ್ತಿವೆ. ಬೆಸ್ಕಾಂ ಅಧಿಕಾರಿಗಳು ತಕ್ಷಣ ಕಂಬ ಗಳನ್ನು ತೆರವುಗೊಳಿಸಿ ಹೊಸ ಕಂಬ ಅಳವಡಿಸಿ ವಿದ್ಯುತ್ ಸರಬರಾಜು ಸುಗಮಗೊಳಿಸಬೇಕೆಂದು ಪಟ್ಟಣದ ನಾಗರಿಕರು ಒತ್ತಾಯಿಸಿದ್ದಾರೆ.

ಗರಿಷ್ಠ 32°c | ಕನಿಷ್ಠ 22°c

ಸುದ್ದಿ ಸಿಂಚನ

ಬಿಜಿಎಸ್ ಬಡಾವಣೆಯಲ್ಲಿ ಆಶ್ರಯ ಮನೆಗಳ ವಿತರಣೆ

ಕನಕಪುರ: ನಗರದ ಬಿಜಿಎಸ್ ಬಡಾವಣೆಯಲ್ಲಿ ಆಶ್ರಯ ಯೋಜನೆಯಡಿ ನಿರ್ಮಿಸಿರುವ ಜಿ ಪ್ಲಸ್ ಒನ್ ಮನೆಗಳನ್ನು ಫಲಾನುಭವಿಗಳಿಗೆ ಆಶ್ರಯ ಕಮಿಟಿ ಅಧ್ಯಕ್ಷ ಡಿ.ಕೆ ಸುರೇಶ್ ವಿತರಿಸಿದರು. ನಗರದ ಕರಡಿ ಗುಡ್ಡೆಬಳಿ ನಗರದ ಬಡ ಹಾಗೂ ಮಧ್ಯಮ ವರ್ಗದ ಸೂರಿಲ್ಲದವರಿಗಾಗಿ ಬಾಲಾಗಂಗಾಧರನಾಥ ಸ್ವಾಮೀಜಿ ಹೆಸರಿನಲ್ಲಿ ನೂತನ ಬಡಾವಣೆ ನಿರ್ಮಿಸಿ 75 ಮನೆಗಳ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಿಸಲಾಯಿತು. ಈ ವೇಳೆ ಎಂಎಲ್ಸಿ ಎಸ್ ರವಿ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ದಿಲೀಪ್, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ವಿಜಯ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಧು ಇತರರಿದ್ದರು.

ಡಿ.ಎಂ.ವಾಸುದೇವಗೆ ಪಿಎಚ್.ಡಿ ಪದವಿ



ದಾಬಸ್‌ಪೇಟೆ: ದೇವರಹೊಸಹಳ್ಳಿಯ ನಿವಾಸಿ, ತುಮಕೂರು ವಿವಿ ಕಲಾ ಕಾಲೇಜಿನ ಅತಿಥಿ ಉಪನ್ಯಾಸಕ ವಾಸುದೇವ ಡಿ.ಎಂ. ವಾಣಿಜ್ಯ ಶಾಸ್ತ್ರ ಅಧ್ಯಯನ ಹಾಗೂ ಸಂಶೋಧನಾ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಪ್ರೊ.ಪಿ. ಪರಮಶಿವಯ್ಯ ಅವರ ಮಾರ್ಗದರ್ಶನದಲ್ಲಿ ವಾಣಿಜ್ಯ ಶಾಸ್ತ್ರದ ಆಯ್ದ ಸಾರ್ವಜನಿಕ ವಲಯದ ಬ್ಯಾಂಕುಗಳ ಕಾರ್ಯಕ್ಷಮತೆಯ ಮೇಲೆ ಡಿಜಿಟಲ್ ಬ್ಯಾಂಕಿಂಗ್ ಪರಿಣಾಮ (Effect of digital Banking on performance of selected public sector Banks) ವಿಷಯಕ್ಕೆ ಪಿಎಚ್‌ಡಿ ಪದವಿ ದೊರೆತಿದೆ. ವಾಸುದೇವ ಅವರನ್ನು ತುಮಕೂರು ವ್ವಿವಿ ಪ್ರಾಧ್ಯಾಪಕರು, ಪೋಷಕರು ಹಾಗೂ ಗ್ರಾಮಸ್ಥರು ಅಭಿನಂದಿಸಿ ಶುಭಕೋರಿದ್ದಾರೆ.

ತಾಲೂಕು ಕಸಾಪ ಅಧ್ಯಕ್ಷ ಕೆ.ಬಿ.ಸದಾನಂದಾರಾಧ್ಯ



ನೆಲಮಂಗಲ: ತಾಲೂಕು ಕಸಾಪ ನೂತನ ಅಧ್ಯಕ್ಷರಾಗಿ ಕವಿ, ಶಿಕ್ಷಕ ಕೆ.ಬಿ.ಸದಾನಂದಾರಾಧ್ಯರನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಸಾಪ ಅಧ್ಯಕ್ಷ ಕೃಷ್ಣಪ್ಪ ಆಯ್ಕೆ ಮಾಡಿ ಆದೇಶಿಸಿದ್ದಾರೆ. ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಮಕೃಷ್ಣಪ್ಪ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಮುನಿರಾಜು, ಮಾಜಿ ಕಸಾಪ ಅಧ್ಯಕ್ಷ ಪ್ರದೀಪ್ ಕುಮಾರ್, ಹಿರಿಯ ಸಾಹಿತಿಗಳಾದ ಶರಣಯ್ಯ ಹಿರೇಮಠ್, ಕಲಾವಿದ ಕೃಷ್ಣಯ್ಯ, ಸಮಾಜ ಸೇವಕ ರವೀಶ್, ರಮೇಶ್ ಉಪಸ್ಥಿತರಿದ್ದು ಶುಭ ಹಾರೈಸಿದರು.

ಶಿಕ್ಷಣ ಜೀವನವನ್ನು ಬೆಳಗಿಸುವ ದಾರಿದೀಪ

ವಿಜಯಪುರ: ಶಿಕ್ಷಣ ಕೇವಲ ಅಕ್ಷರ ಜ್ಞಾನವಲ್ಲ, ಜ್ಞಾನ, ಕೌಶಲ್ಯ ಮತ್ತು ನೈತಿಕತೆ ಬೆಳೆಸುವ ನಿರಂತರ ಪ್ರಕ್ರಿಯೆ. ಉತ್ತಮ ಶಿಕ್ಷಣ ಉಜ್ವಲ ವೃತ್ತಿಜೀವನಕ್ಕೆ ದಾರಿದೀಪವಾಗಲಿದೆ ಎಂದು ಬಸವಕಲ್ಯಾಣ ಮಠಾಧ್ಯಕ್ಷರಾದ ಡಾ.ಮಹದೇವ ಸ್ವಾಮೀಜಿ ಹೇಳಿದರು. ಪಟ್ಟಣದ ಬಸವಕಲ್ಯಾಣ ಮಠದಲ್ಲಿ ಜಿಲ್ಲಾ ಸರ್ವೋದಯ ಮಂಡಳಿ ಆಯೋಜಿಸಿದ್ದ ಸರ್ವೋದಯ ಶಿಕ್ಷಣ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಗಳು, ಶಿಕ್ಷಣ ವ್ಯಕ್ತಿಗೆ ಆತ್ಮವಿಶ್ವಾಸ, ಆರ್ಥಿಕ ಸ್ಥಿರತೆ ಹಾಗೂ ಚಿಂತನಾ ಶಕ್ತಿಯನ್ನು ನೀಡುತ್ತದೆ. ಸಮಾಜದ ಪ್ರಗತಿಗೆ ಶಿಕ್ಷಣವೇ ಅಡಿಪಾಯ, ವಿದ್ಯಾರ್ಥಿಗಳು ಮೌಲ್ಯಾಧಾರಿತ ಶಿಕ್ಷಣಕ್ಕೆ ಒತ್ತು ನೀಡಬೇಕು ಎಂದರು. ಮಹಾರಾಷ್ಟ್ರದ ಸೇವಾಗ್ರಾಮದಲ್ಲಿ ಅಖಿಲ ಭಾರತ ಸರ್ವೋದಯ ಮಂಡಳಿಯ ರಾಷ್ಟ್ರೀಯ ಸರ್ವೋದಯ ಶಿಕ್ಷಣ ಯುವ ಶಿಬಿರದಲ್ಲಿ ಭಾಗವಹಿಸಿದ್ದ ಶಾಂತಿನಗರದ ನಿವಾಸಿ ಗಗನ್ ಅವರನ್ನು ಅಭಿನಂದಿಸ ಲಾಯಿತು. ರಾಷ್ಟ್ರೀಯ ಯುವ ಯೋಜನೆ ರಾಜ್ಯ ಸಂಯೋಜಕ ಡಾ.ವಿ. ಪ್ರಶಾಂತ, ಪ್ರಾಂಶುಪಾಲ ಪ್ರದೀಪ, ಮಠದ ಕಾರ್ಯದರ್ಶಿ ಜಯಕುಮಾರ್ ಇತರರಿದ್ದರು.



ಕನಕಪುರದ ಬಿಜಿಎಸ್ ಬಡಾವಣೆಯಲ್ಲಿ ಆಶ್ರಯ ಯೋಜನೆಯಡಿ ಜಿ ಪ್ಲಸ್ ಒನ್ ಮನೆಗಳನ್ನು ಫಲಾನುಭವಿಗಳಿಗೆ ಆಶ್ರಯ ಕಮಿಟಿ ಅಧ್ಯಕ್ಷ ಡಿ.ಕೆ ಸುರೇಶ್ ವಿತರಿಸಿದರು. ಎಂಎಲ್ಸಿ ರವಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ದಿಲೀಪ್, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ವಿಜಯ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಧು ಇತರರಿದ್ದರು.



ವಿಜಯಪುರದ ಬಸವಕಲ್ಯಾಣ ಮಠದಲ್ಲಿ ಜಿಲ್ಲಾ ಸರ್ವೋದಯ ಮಂಡಳಿ ಆಯೋಜಿಸಿದ್ದ ಸರ್ವೋದಯ ಶಿಕ್ಷಣ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಹಾರಾಷ್ಟ್ರದ ರಾಷ್ಟ್ರೀಯ ಸರ್ವೋದಯ ಶಿಕ್ಷಣ ಯುವ ಶಿಬಿರದಲ್ಲಿ ಭಾಗವಹಿಸಿದ್ದ ಶಾಂತಿನಗರದ ನಿವಾಸಿ ಎಂ.ಗಗನ್ ಅವರನ್ನು ಅಭಿನಂದಿಸಲಾಯಿತು.

ಬಮೂಲ್‌ನಲ್ಲಿ ಅಮೂಲಾಗ್ರ ಬದಲಾವಣೆ: ಡಿಕೆಸು

ಹಾಲು ಉತ್ಪಾದಕರ ಮಕ್ಕಳಿಗೆ ಬಮೂಲ್ ಕೆಲಸದಲ್ಲಿ ಶೇ.25 ಮೀಸಲು | ಕಲ್ಯಾಣ ಟ್ರಸ್ಟ್‌ನಲ್ಲಿ ವಿವಿಧ ಯೋಜನೆಗಳು

• **ಕನ್ನಡಪ್ರಭ ವಾರ್ತೆ** ಚನ್ನಪಟ್ಟಣ

ಬೆಂಗಳೂರು ಹಾಲು ಒಕ್ಕೂಟದಲ್ಲಿ ನಮ್ಮ ಆಡಳಿತ ಮಂಡಳಿ ಅಧಿಕಾರಕ್ಕೆ ಬಂದ ನಂತರ ಅಮೂಲಾಗ್ರ ಬದಲಾವಣೆ ಮಾಡಲಾಗಿದೆ. ಬಮೂಲ್‌ನಲ್ಲಿ ಕೆಲಸ ನೀಡುವಾಗ ಹಾಲು ಉತ್ಪಾದಕರ ಮಕ್ಕಳಿಗೆ ಶೇ.25 ಮೀಸಲಾತಿ ಕಲ್ಪಿಸಲಾಗುವುದು ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ತಿಳಿಸಿದರು.

ತಾಲೂಕಿನ ಬೈರಾಪಟ್ಟಣ ಬಳಿಯ ಬಮೂಲ್ ಶಿಬಿರ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಹಾಲು ಉತ್ಪಾದಕರ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಚೆಕ್ ವಿತರಿಸಿ ಮಾತನಾಡಿದ ಅವರು, ಅದೇ ರೀತಿ ಬಮೂಲ್ ಸಿಬ್ಬಂದಿಯ ಮಕ್ಕಳಿಗೂ ಶೇ.10 ಮೀಸಲಾತಿ ನೀಡಲಾಗುವುದು. ನಾನು ಅಧಿಕಾರ ವಹಿಸಿಕೊಂಡಾಗ 14 ಕೋಟಿ ನಷ್ಟದಲ್ಲಿದ್ದ ಸಂಸ್ಥೆ ಇಂದು 71 ಕೋಟಿ ಲಾಭ ಗಳಿಸಿದೆ. ಅದರಲ್ಲಿ ರೈತರಿಗೆ ಪ್ರೋತ್ಸಾಹಧನ ವಿತರಿಸಿದೆ. ಬಮೂಲ್ ಕಲ್ಯಾಣ ಟ್ರಸ್ಟ್‌ನಲ್ಲಿ ಕೆಲವು ಯೋಜನೆಗಳನ್ನು ರಚಿಸಲಾಗಿದೆ. ಅತಿ ಹೆಚ್ಚು ಅಂಕಗಳಿಸಿದ ಹಾಲು ಉತ್ಪಾದಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದೆ ಎಂದು ಹೇಳಿದರು.

ಖಾಸಗಿ ಪೈಪೋಟಿ: ಬಮೂಲ್ ರೈತರ ಸಂಸ್ಥೆ. ಒಂದು ಕಡೆ ರೈತರು ಒಂದು ಕಡೆ ಗ್ರಾಹಕರು, ಇಬ್ಬರ ಹಿತ ಕಾಯಬೇಕು. ಬಮೂಲ್‌ನಿಂದ ನಿತ್ಯ 17 ಲಕ್ಷ ಲೀಟರ್ ಹಾಲು ಪೂರೈಸುತ್ತಿದ್ದು, ಮುಂದೆ 20 ಲಕ್ಷ ಲೀಟರ್ ತಲುಪುವ ಗುರಿ ಇದೆ. ಸಂಸ್ಥೆ ಬೆಳೆಸಲು ಹಾಗು ಖಾಸಗಿಯವರಿಗೆ ಪೈಪೋಟಿ ನೀಡಲು ಗುಣಮಟ್ಟ ಕಾಪಾಡಬೇಕು ಎಂದು ತಿಳಿಸಿದರು.



ಚನ್ನಪಟ್ಟಣ ತಾಲೂಕಿನ ಬೈರಾಪಟ್ಟಣ ಬಳಿಯ ಬಮೂಲ್ ಶಿಬಿರ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಹಾಲು ಉತ್ಪಾದಕರ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಿಸಲಾಯಿತು.

ರೀಲ್ಸ್ ಗೀಳು ಬಿಡಿ: ಪೋಷಕರು ಮಕ್ಕಳನ್ನು ಕಷ್ಟಪಟ್ಟು ಓದಿಸುತ್ತಿದ್ದಾರೆ. ನೀವು ಚೆನ್ನಾಗಿ ಓದಬೇಕು. ಮಕ್ಕಳು ಪೋಷಕರಿಗೆ ಸಹಾಯಕರಾಗಿ ನಿಲ್ಲಬೇಕು. ಮಕ್ಕಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು. ಮಕ್ಕಳು ರೀಲ್ಸ್ ನೋಡುವ ಮಾಡುವ ಗೀಳು ಬಿಟ್ಟು ಉತ್ತಮ ಚಿಂತನೆ ಅಳವಡಿಸಿಕೊಂಡು ಬದುಕು ರೂಪಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಶಾಸಕ ಯೋಗೇಶ್ವರ್ ಮಾತನಾಡಿ, ಸುರೇಶ್ ಬಮೂಲ್ ಅಧ್ಯಕ್ಷರಾದ ಬಳಿಕ ಕ್ರಾಂತಿಕಾರಿ ಬದಲಾವಣೆ ಆಗಿದೆ. ಅವರು ಬಹಳ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದ್ದಾರೆ. ಇಡೀ ರಾಜ್ಯದಲ್ಲೇ ಹೆಚ್ಚು ಹಾಲು ಪೂರೈಸುವ ತಾಲೂಕು ನಮ್ಮದು. ರೈತರಿಗೆ ಪೂರಕ ಕೆಲಸಗಳನ್ನು ಬಮೂಲ್ ಮಾಡುತ್ತಿದೆ. ಫೀಡ್ಸ್ ಗುಣಮಟ್ಟವನ್ನು ಸರಿಪಡಿಸಲು ತಾಲೂಕಿನಲ್ಲೇ ಫೀಡ್ಸ್ ಕಾರ್ಖಾನೆ ಸ್ಥಾಪಿಸಿದರೆ ರೈತರಿಗೆ ಅನುಕೂಲವಾಗುತ್ತದೆ ಎಂದರು.

ಬಮೂಲ್ ನಿರ್ದೇಶಕ ಲಿಂಗೇಶ್‌ಕುಮಾರ್ ಮಾತನಾಡಿ, ನಮ್ಮ ಒಕ್ಕೂಟಕ್ಕೆ ಡಿ.ಕೆ.ಸುರೇಶ್ ಅಧ್ಯಕ್ಷರಾದ ಮೇಲೆ ತಾಲೂಕಿನ ರೈತರಿಗೆ 10 ಕೋಟಿ ಪ್ರೋತ್ಸಾಹ ಧನ ನೀಡಲಾಗಿದೆ. ಹಾಲು ಸಂಗ್ರಹ ಸೇರಿದಂತೆ ಎಲ್ಲವನ್ನು ಆನ್‌ಲೈನ್ ಮಾಡಲಾಗಿದೆ. ಸುರೇಶ್ ಕೆಎಂಎಫ್ ಅಧ್ಯಕ್ಷರಾದರೆ, ಇನ್ನಷ್ಟು ಅನುಕೂಲ ವಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಮೂಲ್ ಉಪಾಧ್ಯಕ್ಷ ರಾಜಣ್ಣ, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷ ಎಸ್.ಗಂಗಾಧರ್, ಗ್ಯಾರೆಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಬೋರ್‌ವೆಲ್ ರಂಗನಾಥ್, ಹಾಪ್‌ಕಾಮ್ಸ್ ನಿರ್ದೇಶಕ ಪ್ರದೀಪ್ ಕುಮಾರ್, ನಗರಸಭೆ ಅಧ್ಯಕ್ಷ ನಾಗೇಶ್, ನಗರಸಭೆ ಮಾಜಿ ಅಧ್ಯಕ್ಷ ವಾಸೀಲ್ ಅಲಿಕಾನ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುನೀಲ್ ಇತರರಿದ್ದರು.

ಬಿಜೆಪಿಯಿಂದ ರಾಜ್ಯಪಾಲರ ಕಚೇರಿ ದುರ್ಬಳಕೆ

ಚನ್ನಪಟ್ಟಣ: ತಮಿಳುನಾಡಿನಲ್ಲಿ ಟಿವಿಕೆ ಸರ್ಕಾರ ರಚನೆ ಮಾಡಲಿಕ್ಕೆ ಸಾಂವಿಧಾನಿಕ ಅವಕಾಶ ಇದೆ. ಟಿವಿಕೆ ಶಾಸಕರ ಬಲವೂ ಹೆಚ್ಚಾಗಿಯೇ ಇದೆ. ಆದರೂ ವಿಳಂಬ ಮಾಡುತ್ತಿರೋ ರಾಜ್ಯಪಾಲರ ನಡೆ ಮೇಲೆ ಅನುಮಾನ ಬರುತ್ತಿದ್ದು, ಇದರ ಹಿಂದೆ ಬಿಜೆಪಿಯ ಕೇಂದ್ರ ಸರ್ಕಾರ ಇದ್ದು, ರಾಜ್ಯಪಾಲರ ಮೂಲಕ ಬೆದರಿಕೆ ತಂತ್ರ ಅನುಸರಿಸುತ್ತಿದೆ ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಮೊದಲು ಐಟಿ, ಇಡಿ ಹಾಗೂ ಸಿಬಿಐ ಬಳಸುತ್ತಿತ್ತು. ಈಗ ರಾಜ್ಯಪಾಲರ ಕಚೇರಿ ಕೂಡಾ ದುರ್ಬಳಕೆ ಆಗುತ್ತಿದೆ. ಬಿಜೆಪಿಯೇತರ ಸರ್ಕಾರ ರಚನೆ ಮಾಡಲಿಕ್ಕೆ ಕೇಂದ್ರ ತೊಂದರೆ ಕೊಡುತ್ತಿದೆ. ಇನ್ನಾದರೂ ಬಿಜೆಪಿ ಸಾಂವಿಧಾನಿಕ ಹುದ್ದೆಗಳ ದುರ್ಬಳಕೆಯನ್ನ ನಿಲ್ಲಿಸಲಿ ಎಂದರು.

ತಮಿಳುನಾಡಿನಲ್ಲಿ ಕಾಂಗ್ರೆಸ್ ಪಕ್ಷ ಡಿಎಂಕೆ ಬಿಟ್ಟು ಟಿವಿಕೆಗೆ ಬೆಂಬಲ ನೀಡುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಆ ರೀತಿ ಏನಿಲ್ಲ, ನಾವು ಅಲ್ಲಿಯ ನಾಯಕರ ಗಮನಕ್ಕೆ ತಂದಮೇಲೆ ನಮ್ಮ ಪಕ್ಷ ಈ ತೀರ್ಮಾನ ತೆಗೆದುಕೊಂಡಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರ ರಚನೆಗೆ ಬೆಂಬಲ ಕೊಡೋದು ಸಾಮಾನ್ಯ. ಡಿಎಂಕೆ ಕೂಡ ನಾವು ಸೈಲೆಂಟ್ ಆಗಿ ಇರ್ತೀವಿ ಅನ್ನೋದನ್ನ ಸ್ಪಷ್ಟಪಡಿಸಿದೆ. ಹಾಗಾಗಿ ಏನಾಗುತ್ತೋ ಕಾದು ನೋಡೋಣ ಎಂದು ಹೇಳಿದರು.

ಪಶ್ಚಿಮ ಬಂಗಾಳದ ಮಾಜಿ ಸಿಎಂ ಚುನಾವಣಾ ಆಯೋಗದ ವಿರುದ್ಧ ಸುಪ್ರೀಂಕೋರ್ಟ್‌ಗೆ ಹೋಗುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಪಶ್ಚಿಮ ಬಂಗಾಳದಲ್ಲಿ ಹಣಬಲ, ತೋಳ್ಬಲ ಪ್ರದರ್ಶನ ಆಗಿದೆ. ಕಳೆದ ಒಂದು ವರ್ಷದಿಂದ ಅಲ್ಲಿಯ ಸರ್ಕಾರ ತೆಗೆಯಲು ಬಿಜೆಪಿ ಸಕಲ ಪ್ರಯತ್ನ ಮಾಡಿದೆ. ಸುಮಾರು 97 ಲಕ್ಷ ಮತದಾರರನ್ನ ರಾಜ್ಯದಿಂದ ಹೊರ ಹಾಕಿದ್ದಾರೆ. ಬಿಜೆಪಿ ವ್ಯವಸ್ಥಿತ ರಾಜಕೀಯ ಪಿತ್ತೂರಿಗಳ್ನ ಮಾಡಿದ್ದರಿಂದ ಟಿಎಂಸಿಗೆ ಹಿನ್ನಡೆ ಆಗಿದೆ ಎಂದರು.

ಬಿಜೆಪಿ ಮಾಗಡಿ ತಾಲೂಕು ಪದಾಧಿಕಾರಿಗಳ ಪಟ್ಟಿ ಬಿಡುಗಡೆ


ಪಕ್ಷದ ಬಲವರ್ಧನೆಗೆ ಶ್ರಮಿಸುವ ಉತ್ಸಾಹಿ ಕಾರ್ಯಕರ್ತರಿಗೆ ಜವಾಬ್ದಾರಿ: ಪ್ರಸಾದ್ ಗೌಡ

• **ಕನ್ನಡಪ್ರಭ ವಾರ್ತೆ** ಮಾಗಡಿ

ಮಾಗಡಿ ಮಂಡಲದ ಬಿಜೆಪಿ ನೂತನ ಪದಾಧಿಕಾರಿಗಳ ಪಟ್ಟಿಯನ್ನು ತಾಲೂಕು ಅಧ್ಯಕ್ಷ ಪ್ರಸಾದ್‌ಗೌಡ ಬಿಡುಗಡೆ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಿ ಮಾತನಾಡಿದ ಅವರು, ಪಕ್ಷ ಬಲವರ್ಧನೆಗೆ ಶ್ರಮಿಸುವ ಉತ್ಸಾಹಿ ಕಾರ್ಯ ಕರ್ತರಿಗೆ ಜವಾಬ್ದಾರಿ ನೀಡಲಾಗಿದೆ. ಬೂತ್‌ಮಟ್ಟದಲ್ಲಿ ಪಕ್ಷ ಸಂಘಟನೆಗೆ ಒತ್ತು ನೀಡಬೇಕು. ತಮ್ಮನ್ನು ಮಾಗಡಿ ಮಂಡಲದ ಅಧ್ಯಕ್ಷರನ್ನಾಗಿ ನೇಮಕ ಮಾಡಿರುವ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಡಿಸಿಎಂ ಡಾ.ಅಶ್ವತ್ಥನಾರಾಯಣ್, ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್ ಹಾಗೂ ಸಂಸದ ಡಾ. ಮಂಜುನಾಥ್ ಅವರಿಗೆ ಧನ್ಯವಾದ ಅರ್ಪಿಸುತ್ತೇನೆ ಎಂದರು.

ಜನರ ಋಣ ತೀರಿಸಲು ತಾಲೂಕಾದ್ಯಂತ ಪಕ್ಷವನ್ನು ಇನ್ನಷ್ಟು ಬಲಪಡಿಸ ಬೇಕು. ಹಳೆ ಮತ್ತು ಹೊಸ ನಾಯಕರನ್ನು ಒಗ್ಗೂಡಿಸಿಕೊಂಡು ಪ್ರತಿ ಬೂತ್ ಮಟ್ಟದಲ್ಲಿ ಪಕ್ಷ ಕಟ್ಟುವುದು ನಮ್ಮ ಗುರಿ. ಅಶ್ವತ್ಥನಾರಾಯಣ್ ಅವರು ಸಚಿವರಾಗಿದ್ದಾಗ ಈ ಕ್ಷೇತ್ರಕ್ಕೆ ನೀಡಿದ ಕೊಡುಗೆ ಮತ್ತು ಮೋದಿಯವರ ಅಭಿವೃದ್ಧಿ ಕೆಲಸಗಳನ್ನು ಜನರಿಗೆ ತಲುಪಿಸುತ್ತೇವೆ ಎಂದು ಪ್ರಸಾದ್ ಗೌಡ ಹೇಳಿದರು.



ಮಾಗಡಿ ಬಿಜೆಪಿ ತಾಲೂಕು ಅಧ್ಯಕ್ಷ ಪ್ರಸಾದ್ ಗೌಡ ನೂತನ ಪದಾಧಿಕಾರಿಗಳ ಪ್ರಮಾಣ ಪತ್ರ ವಿತರಿಸಿದರು.

ಉಚಿತ ನಿವೇಶನ: ಬಡವರಿಗಾಗಿ ತಾವು ವೈಯಕ್ತಿಕವಾಗಿ ಖರೀದಿಸಿರುವ 10 ಎಕರೆ ಜಾಗದಲ್ಲಿ ಶೀಘ್ರದಲ್ಲೇ ಉಚಿತ ನಿವೇಶನ ಹಂಚಿಕೆ ಮಾಡಲಾಗುತ್ತದೆ. ಸಂಸದರ ನಿಧಿ ಹಾಗೂ ವೈಯಕ್ತಿಕ ಸಹಕಾರ ದೊಂದಿಗೆ ಹೈಮಾಸ್ಟ್ ದೀಪಗಳು ಮತ್ತು ಬಸ್ ನಿಲ್ದಾಣಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಪದಾಧಿಕಾರಿಗಳ ಆಯ್ಕೆ: ತಾಲೂಕು ಬಿಜೆಪಿ ಉಪಾಧ್ಯಕ್ಷರಾಗಿ ಹನುಮಂತೇಗೌಡ (ತಿಪ್ಪಸಂದ್ರ), ರೇವಣ್ಣ (ಬಿಡದಿ), ಚನ್ನಬಸಯ್ಯ (ಉಡುವೆಗೆರೆ), ಮಂಜುನಾಥ್ (ಹುಳ್ಳೇನ ಹಳ್ಳಿ), ಲವ (ಪೂಜಾರಿಪಾಳ್ಯ), ಸಿದ್ದೇಗೌಡ (ಮೆಳ್ಳಹಳ್ಳಿ) ಪ್ರಧಾನ ಕಾರ್ಯದರ್ಶಿಗಳಾಗಿ ಶ್ರೀಧರ್ (ಚಿಕ್ಕಕಲ್ಯಾ), ಜಯರಾಂ (ಮಾಗಡಿ ಪಟ್ಟಣ), ಕಾರ್ಯದರ್ಶಿಗಳಾಗಿ ಅರುಣ್ ಕುಮಾರ್(ಕೂಟಗಲ್), ಶ್ರೀನಿವಾಸ್ (ತಿಪ್ಪಸಂದ್ರ), ಪ್ರದೀಪ್ ಅಪ್ಪಿ (ಮಾಡಬಾಳ್ ಹೊಬಳಿ), ಶರತ್ (ಬಿಡದಿ), ಗಗನ್ ಸುಗ್ಗನಹಳ್ಳಿ, ಉಮೇಶ್ (ಬಿಡದಿ) ರನ್ನು ಆಯ್ಕೆ ಮಾಡಲಾಯಿತು.

ಇದೇ ವೇಳೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ, ರಾಘವೇಂದ್ರ , ಬಿಜೆಪಿ ಮುಖಂಡರಾದ ರಾಜೇಶ್, ಶಶಿ ಮೊದಲಾದವರು ಉಪಸ್ಥಿತರಿದ್ದರು.

ಬೆಂ. ಗ್ರಾಮಾಂತರ ಜಿಲ್ಲೇಲಿ 11 ಬಾಲ ಕಾರ್ಮಿಕರ ರಕ್ಷಣೆ

• **ಕನ್ನಡಪ್ರಭ ವಾರ್ತೆ** ದೊಡ್ಡಬಳ್ಳಾಪುರ

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸೂಲಿಬೆಲೆ ಹೋಬಳಿ ವ್ಯಾಪ್ತಿಯ ಖಾಸಗಿ ಕಂಪನಿಗೆ ಸೇರಿದ ಗೋಡೌನ್ ಒಂದರಲ್ಲಿ ರಾತ್ರಿ ಪಾಳಿಯಲ್ಲಿ ಬಾಲ ಕಾರ್ಮಿಕರು ಕೆಲಸ ಮಾಡುತ್ತಿರುವ ಖಚಿತ ಮಾಹಿತಿ ಮೇರೆಗೆ ಕಾರ್ಮಿಕ ಇಲಾಖೆ ಕಾರ್ಯಾಚರಣೆ ನಡೆಸಿ 11 ಮಕ್ಕಳ ರಕ್ಷಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಹರ್ಷವರ್ಧನ್ ತಿಳಿಸಿದ್ದಾರೆ.

ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಬಾಲ ಕಾರ್ಮಿಕ ಯೋಜನೆ, ಹೊಸಕೋಟೆ ತಾಲೂಕಿನ ಕಾರ್ಮಿಕ ನಿರೀಕ್ಷಕರು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರು ಜಂಟಿ ತಪಾಸಣೆ ಕೈಗೊಂಡು ರಕ್ಷಿಸಲಾಗಿದೆ. ರಕ್ಷಿಸಿದ ಬಾಲ ಮತ್ತು ಕಿಶೋರ ಕಾರ್ಮಿಕನನ್ನು ಮಕ್ಕಳ ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿಯ ಮೌಖಿಕ ಆದೇಶದ ಮೇರೆಗೆ ದೇವನಹಳ್ಳಿ ತಾಲೂಕಿನ ಸರ್ಕಾರಿ ಬಾಲಕರ ಬಾಲಮಂದಿರಕ್ಕೆ ದಾಖಲಿಸಲಾಗಿದೆ, ಮಾಲೀಕರ ಮೇಲೆ ಸೂಕ್ತ ಕಾನೂನು ಕ್ರಮಕ್ಕೆಗೊಳ್ಳಲಾಗುವುದು.

ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ, 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿದಲ್ಲಿ ಅಂತಹವರಿಗೆ ಕನಿಷ್ಠ 06 ತಿಂಗಳಿಗಿಂತ ಕಡಿಮೆ ಇಲ್ಲದಂತೆ ಮತ್ತು ಗರಿಷ್ಠ 02 ವರ್ಷದವರೆಗೂ ಜೈಲು ಶಿಕ್ಷೆ ಹಾಗೂ ₹50 ಸಾವಿರದವರೆಗೂ ದಂಡ ವಿಧಿಸಲಾಗುತ್ತದೆ. 18 ವರ್ಷದೊಳಗಿನ ಯಾವುದೇ ಮಕ್ಕಳನ್ನು ಕೆಲಸಕ್ಕೆ ನೇಮಿಸಿ ಕೊಂಡಿರುವುದು ಕಂಡು ಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಮತ್ತು ಪೊಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ 112ಕ್ಕೆ ಕರೆ ಮಾಡಿ ಮಾಹಿತಿ ನೀಡಬೇಕೆಂದು ಜಿಲ್ಲಾ ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಬಾಲಕಾರ್ಮಿಕ ಯೋಜನೆ ಸೊಸೈಟಿ ಯೋಜನಾ ನಿರ್ದೇಶಕರಾದ ಗಣೇಶಮೂರ್ತಿ, ಹೊಸಕೋಟೆ ತಾಲೂಕಿನ ಕಾರ್ಮಿಕ ನಿರೀಕ್ಷಕ ಯತೀಶ್ ಕುಮಾರ್, ಇತರೆ ಸಿಬ್ಬಂದಿ ಇದ್ದರು.

ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ದೊಡ್ಡಬಳ್ಳಾಪುರ: ಮೈಸೂರಿನ ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್ ವಿದ್ಯಾಸಂಸ್ಥೆಯಲ್ಲಿ 2026-27ನೇ ಸಾಲಿಗೆ 3 ವರ್ಷಗಳ ಅವಧಿಯ ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಕ್ಕೆ ವಿಶೇಷಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 5 ಕೊನೆ ದಿನವಾಗಿದ್ದು, ಎಸ್ಸೆಸ್ಸೆಲ್ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹಾಗೂ ಮೂಳೆ ಮತ್ತು ಕೀಲು ಅಂಗವಿಕಲತೆ - ಶೇ. 40 ಮತ್ತು ಮೇಲ್ಪಟ್ಟು, ಕಿವುಡು ಮತ್ತು ಮೂಗು ಅಂಗವಿಕಲತೆ - 60 ಡಿಬಿ ಮತ್ತು ಮೇಲ್ಪಟ್ಟು, ಅಂಧತ್ವವನ್ನು - 6/60 ಅಥವಾ 20/200 ಸ್ನೈಲನ್ ಅಂಗವೈಕಲ್ಯತೆಯ ಲಕ್ಷಣಗಳನ್ನು ಹೊಂದಿರುವವರಾಗಿರಬೇಕು. ಅರ್ಹರಿಗೆ ರಾಜ್ಯ ಮತ್ತು ರಾಷ್ಟ್ರಮಟ್ಟದ ವಿದ್ಯಾರ್ಥಿವೇತನದ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶ ಕಲ್ಪಿಸಿಕೊಡಲಾಗುತ್ತದೆ. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿದ್ಯಾರ್ಥಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.jsspda.org ಅಥವಾ ದೂರವಾಣಿ ಸಂಖ್ಯೆ 98446 44937 ಸಂಪರ್ಕಿಸಲು ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್ ವಿದ್ಯಾಸಂಸ್ಥೆ ಪ್ರಕಟಣೆ ತಿಳಿಸಿದೆ.

ಸಬ್ ರಿಜಿಸ್ಟ್ರಾರ್ ಕಚೇರಿ ಸ್ಥಳಾಂತರಕ್ಕೆ ಕರ್ನಾಟಕ ಯುವಶಕ್ತಿ ವೇದಿಕೆ ಒತ್ತಾಯ

ಉಪನೋಂದಣಾಧಿಕಾರಿ ಸುರೇಶ್ ಅವರಿಗೆ ಮನವಿ ಪತ್ರ



ಕನಕಪುರ: ನಗರದ ಅಯ್ಯಪ್ಪಸ್ವಾಮಿ ದೇವಾಲಯದ ಬಳಿ ಕರ್ತವ್ಯ ನಿರ್ವಹಿಸುತ್ತಿರುವ ಸಬ್ ರಿಜಿಸ್ಟ್ರಾರ್ ಕಚೇರಿಯನ್ನು ಕೂಡಲೇ ಬಾಡಿಗೆ ಕಟ್ಟಡದಿಂದ ಸರ್ಕಾರಿ ಕಟ್ಟಡಕ್ಕೆ ಸ್ಥಳಾಂತರಿಸುವಂತೆ ಒತ್ತಾಯಿಸಿ ಕರ್ನಾಟಕ ಯುವಶಕ್ತಿ ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಚನ್ನಬಸಪ್ಪ ವೃತ್ತದ ಬಳಿ ಜಮಾವಣೆಗೊಂಡ ಕಾರ್ಯಕರ್ತರು ಸಬ್ ರಿಜಿಸ್ಟ್ರಾರ್ ಕಚೇರಿವರೆಗೂ ಮೆರವಣಿಗೆ ನಡೆಸಿ ಉಪನೋಂದಣಾಧಿಕಾರಿ ಸುರೇಶ್‌ಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಯುವಶಕ್ತಿ ವೇದಿಕೆಯ ಅಧ್ಯಕ್ಷ ಶ್ರೀನಿವಾಸ್, ಖಾಸಗಿ ಕಟ್ಟಡದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕಚೇರಿ ಸ್ಥಳಾಂತರಕ್ಕೆ ಸಂಬಂಧಿಸಿದಂತೆ ಅನೇಕ ಬೇಡಿಕೆಗಳು ಮತ್ತು ವಿರೋಧಗಳು ವ್ಯಕ್ತವಾಗಿವೆ. ಸರ್ಕಾರಿ ಕಟ್ಟಡಗಳು ಖಾಲಿ ಇದ್ದರೂ ಮಾಸಿಕ ಲಕ್ಷಾಂತರ ರುಪಾಯಿ ಬಾಡಿಗೆ ನೀಡಿ ಖಾಸಗಿ ಕಟ್ಟಡದಲ್ಲಿ ನಡೆಸುತ್ತಿರುವ ಈ ಕಚೇರಿ ಜನರಿಗೆ ಅನನುಕೂಲವಾಗಿದೆ. ಕಲ್ಯಾಣ ಮಂಟಪ ವಾಗಿದ್ದ ಈ ಜಾಗವನ್ನು ಸಬ್ ರಿಜಿಷ್ಟ್ರಾರ್‌ಕಚೇರಿಯಾಗಿ ಪರಿವರ್ತಿಸಿದ್ದು ಕಟ್ಟಡದ ಮಾಲೀಕರಿಗೆ ಅನುಕೂಲವಾ ಗುತ್ತದೆಯೇ ಹೊರತು ಜನರಿಗೆ ತೊಂದರೆಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಕಚೇರಿಗೆ ಮಹಿಳೆಯರು, ವೃದ್ಧರು, ವಿಕಲಚೇತನರು ಹೋಗಿ ಬರಲು ಕಷ್ಟವಾಗಿದೆ. ಮೂಲ ಸೌಲಭ್ಯಗಳು ಕೂಡ ಇದರಲ್ಲಿ ಇಲ್ಲ. ಸ್ಥಳೀಯ ಜನಪ್ರತಿನಿಧಿಗಳು ಆಸಕ್ತಿ ವಹಿಸಿ ಅವ್ಯವಸ್ಥೆಯ ಆಗರವಾಗಿರುವ ಈ ಕಚೇರಿಯನ್ನು ಸರ್ಕಾರಿ ಕಟ್ಟಡಕ್ಕೆ ಸ್ಥಳಾಂತರಿಸಬೇಕೆಂದು ಒತ್ತಾಯಿಸಿದರು. ಈ ವೇಳೆ ವೇದಿಕೆ ನಗರಾಧ್ಯಕ್ಷ ನವೀನ್, ಮುಖಂಡರಾದ ಮನು, ಅರುಂಧತಿ, ಕೋಡಿಹಳ್ಳಿ ಸಿದ್ದರಾಜು, ಚಂದ್ರು, ವೆಂಕಟೇಶ್, ಚಾಂದ್‌ಪಾಷ, ಸಲೀಂ, ಕೌಸರ್‌ಖಾನ್, ಆದಿಲ್‌ಪಾಷ ಉಪಸ್ಥಿತರಿದ್ದರು.

ಮುಖ್ಯವಾಹಿನಿಗೆ ಬನ್ನಿ | ಕುಂಬಳಹಳ್ಳಿಯಲ್ಲಿ ಮಹಿಳಾ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಪ್ರತಿಭಾ ಶರತ್ ಅಭಿಮತ

ಮಹಿಳೆಯರು ಸ್ವಯಂಪ್ರೇರಿತವಾಗಿ ಕ್ರೀಡಾಕೂಟದಲ್ಲಿ ಭಾಗವಹಿಸಿ

• **ಕನ್ನಡಪ್ರಭ ವಾರ್ತೆ** ಹೊಸಕೋಟೆ

ಗ್ರಾಪಂ ಮಟ್ಟದಲ್ಲಿ ಆಯೋಜಿಸುವ ಮಹಿಳಾ ಕ್ರೀಡಾಕೂಟಗಳಲ್ಲಿ ಮಹಿಳೆಯರು ಸ್ವಯಂ ಪ್ರೇರಿತವಾಗಿ ಪಕ್ಷಾತೀತವಾಗಿ, ಧರ್ಮಾತೀತವಾಗಿ ಭಾಗವಹಿಸಬೇಕು ಎಂದು ಟೀಮ್ ಎಸ್‌ಬಿಜಿ ತಂಡದ ಸಂಚಾಲಕಿ ಪ್ರತಿಭಾ ಶರತ್ ತಿಳಿಸಿದರು.

ತಾಲೂಕಿನ ಕುಂಬಳಹಳ್ಳಿ ಗ್ರಾಪಂ ವತಿಯಿಂದ ಮಹಿಳಾ ಗ್ರಾಮ ಸಭೆ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಮಹಿಳೆಯರ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮ ಮಟ್ಟದಿಂದಲೇ ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಸ್ವಯಂ ಪ್ರೇರಣೆಯಿಂದ ಬರಬೇಕು. ಆ ಮೂಲಕ ಆರ್ಥಿಕವಾಗಿ, ಔದ್ಯೋಗಿಕವಾಗಿ, ಸಾಮಾಜಿಕವಾಗಿ, ರಾಜಕೀಯವಾಗಿ, ಶೈಕ್ಷಣಿಕವಾಗಿ ಸಮಾಜದ ಮುನ್ನೆಲೆಗೆ ಬರುವ ಪ್ರಯತ್ನ ಮಾಡಬೇಕು ಎಂಬ ಶಾಸಕ ಶರತ್ ಬಚ್ಚೇಗೌಡರ ಆಶಯದಂತೆ ಗ್ರಾಪಂ ಮಟ್ಟದಲ್ಲಿ ಮಹಿಳೆಯರ ಕ್ರೀಡಾಕೂಟ ಆಯೋಜಿಸಿದ್ದೇವೆ ಎಂದು ಹೇಳಿದರು. ಒಂದೇ ವೇದಿಕೆಯಲ್ಲಿ ಎಲ್ಲಾ ಮಹಿಳೆಯರನ್ನು ಒಟ್ಟುಗೂಡಿಸುವುದೇ ಈ ಕ್ರೀಡಾಕೂಟದ ಮುಖ್ಯ ಉದ್ದೇಶ. ಮನೆಯಲ್ಲಿ ನಾಲ್ಕು ಗೋಡೆಗಳ ಮಧ್ಯೆ ಇರುವ ಮಹಿಳೆಯರಿಗೆ ತಮ್ಮ ಪ್ರತಿಭೆ ಅನಾವರಣದೊಂದಿಗೆ ಒಂದಿಷ್ಟು ಚೈತನ್ಯ ತುಂಬುವ ಉದ್ದೇಶದಿಂದ ಶಾಸಕ ಶರತ್ ಬಚ್ಚೇಗೌಡರು ಮಹಿಳೆಯರಿಗಾಗಿ ಕ್ರೀಡಾಕೂಟಗಳನ್ನು ಆಯೋಜಿಸಲು ಸೂಚಿಸಿದ್ದಾರೆ. ಇದರಿಂದ ಅವರಲ್ಲಿ ಆತ್ಮಸ್ಥೈರ್ಯ ತುಂಬಿದಂತಾಗುತ್ತದೆ ಎಂದರು.



ಹೊಸಕೋಟೆ ತಾಲೂಕಿನ ಕುಂಬಳಹಳ್ಳಿ ಗ್ರಾಪಂ ವತಿಯಿಂದ ಆಯೋಜಿಸಿದ್ದ ಮಹಿಳಾ ಕ್ರೀಡಾಕೂಟವನ್ನು ಟೀಮ್ ಎಸ್‌ಬಿಜಿ ತಂಡದ ಸಂಚಾಲಕಿ ಪ್ರತಿಭಾ ಶರತ್ ಉದ್ಘಾಟಿಸಿದರು.

ಪಿಡಿಒ ಚೇತನ್ ಮಾತನಾಡಿ, ಗ್ರಾಮ ಪಂಚಾಯ್ತಿಯಿಂದ ಆಯೋಜಿಸುವ ಗ್ರಾಮ ಸಭೆಗೆ ಪೂರಕವಾಗಿ ಮಹಿಳೆಯರಿಗೆ ಕ್ರೀಡಾಕೂಟಗಳನ್ನು ಆಯೋಜಿಸುತ್ತಿದ್ದೇವೆ. ವಿಜೇತರಾದ ಮಹಿಳೆಯರಿಗೆ ಮಹಿಳಾ ಗ್ರಾಮ ಸಭೆಯಲ್ಲಿ ಶಾಸಕ ಶರತ್ ಬಚ್ಚೇಗೌಡರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದರು.

ಸಿಡಿಪಿಒ ಶಿವಮ್ಮ ಮಾತನಾಡಿ, ಮಹಿಳೆಯರು ಕೇವಲ ಕುಟುಂಬಕ್ಕೆ ಮಾತ್ರ ಸೀಮಿತರಾಗದೆ ಸಮಾಜದಲ್ಲಿ ಪ್ರಮುಖ ಭಾಗವಾಗಿ ತಮ್ಮ ಕರ್ತವ್ಯಗಳ ಪಾಲನೆ ಜೊತೆ ಹಕ್ಕುಗಳನ್ನು ಪಡೆಯಲು ಮುಂದಾಗಬೇಕು. ಸಮಾಜದಲ್ಲಿ ನಡೆಯುವ ಮಹಿಳೆಯರ ಮೇಲಿನ ದೌರ್ಜನ್ಯ ತಡೆ, ಸ್ವಂತ ಕೌಶಲ್ಯದಿಂದ ಉದ್ಯೋಗ ಸೃಷ್ಟಿ, ಗುಡಿ ಕೈಗಾರಿಕೆಗಳಲ್ಲಿ ತೊಡಗಿಕೊಳ್ಳುವುದು, ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆಗೆ ಮುಂದಾಗುವುದು, ಕ್ರೀಡೆಗಳಲ್ಲಿ ಭಾಗವಹಿಸುವುದು ಹೀಗೆ ಹಲವಾರು ವಿಭಾಗಗಳಲ್ಲಿ ಸಕ್ರಿಯರಾಗಬೇಕು ಎಂದು ತಿಳಿಸಿದರು.

ಗ್ರಾಮ ಪಂಚಾಯತಿ ವ್ಯಾಪ್ತಿಯ 11 ಗ್ರಾಮದ ಮಹಿಳೆಯರು ಥ್ರೋಬಾಲ್, ಮ್ಯುಸಿಕಲ್ ಚೇರ್, ಚಮಚದಲ್ಲಿ ನಿಂಬೆ ಓಟ, ರಂಗೋಲಿ ಸ್ಪರ್ಧೆ, ಹಗ್ಗ ಜಗ್ಗಾಟದ ಜೊತೆ ಹಲವಾರು ಕ್ರೀಡೆಗಳು ಆಯೋಜಿಸಲಾಗಿತ್ತು.

ಈ ವೇಳೆ ಎಸ್‌ಎಫ್‌ಸಿಎಸ್ ಅಧ್ಯಕ್ಷ ಸತೀಶ್, ಜಿಪಂ ಮಾಜಿ ಅಧ್ಯಕ್ಷ ಸಿ. ಮುನಿಯಪ್ಪ, ಮುಖಂಡರಾದ ವಾಗಟ ನರೇಂದ್ರ, ಇತರರು ಹಾಜರಿದ್ದರು.

ದೇಶದಲ್ಲಿಯೇ ಮೊದಲ ಬಾರಿಗೆ ನಗರಸಭೆ ಆವರಣದಲ್ಲಿ ಸಂವಿಧಾನ ಶಿಲ್ಪಿ ಅಂಬೇಡ್ಕರ್‌ಪುತ್ಥಳಿ, ಸಂವಿಧಾನ ಪೀಠಿಕೆ ಸ್ಥಾಪಿಸಿರುವುದು. ಈಗ ಬಸವಣ್ಣರ ಪುತ್ಥಳಿ ಅನಾವರಣ ಮಾಡಿ ಕೆ.ಶೇಷಾದ್ರಿ ನಗರಸಭೆಗೆ ಕೀರ್ತಿ ತಂದಿದ್ದಾರೆ. ಬಸವಣ್ಣರ ತತ್ವಗಳನ್ನು ಸಂವಿಧಾನದಲ್ಲಿ ನೋಡುತ್ತಿದ್ದು, ಅದೆಲ್ಲವನ್ನು ಕಾನೂನಿನಲ್ಲಿ ಜಾರಿಗೆ ತರುತ್ತಿದ್ದೇವೆ. ಕನ್ನಡ ಸಾರಸ್ವತ ಲೋಕಕ್ಕೂ ಕೊಡುಗೆ ನೀಡಿದ ಬಸವಣ್ಣ ಮಹಾನ್ ಮಾನವತವಾದಿ, ಸಮಸಮಾಜದ ಚಿಂತಕರು.

• **ಎಚ್.ಎಂ.ರೇವಣ್ಣ,** ರಾಜ್ಯಾಧ್ಯಕ್ಷರು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ

ಅಸಂಘಟಿತ ಕಾರ್ಮಿಕರ ಹಿತ ಕಾಪಾಡಲು ಬದ್ಧ

ಶಾಸಕ ಇಕ್ಬಾಲ್ ಹುಸೇನ್ ಭರವಸೆ | ಅಸಂಘಟಿತ ಕಾರ್ಮಿಕರ ನೋಂದಣಿ ಅಭಿಯಾನಕ್ಕೆ ಚಾಲನೆ

• **ಕನ್ನಡಪ್ರಭ ವಾರ್ತೆ** ರಾಮನಗರ

ಅಸಂಘಟಿತ ವರ್ಗಗಳಲ್ಲಿ ದುಡಿಯುತ್ತಿರುವ ಕಾರ್ಮಿಕರಿಗಾಗಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಸಾಮಾಜಿಕ ಭದ್ರತೆ ಒದಗಿಸುವ ಕಾರ್ಯಕ್ರಮಗಳನ್ನು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸಬಲತೆ ಸಾಧಿಸುವಂತೆ ಶಾಸಕ ಇಕ್ಬಾಲ್ ಹುಸೇನ್ ಕಿವಿಮಾತು ಹೇಳಿದರು.

ನಗರದ ಅಲ್ ಕರೀಮ್ ಫಂಕ್ಷನ್ ಹಾಲ್‌ನಲ್ಲಿ ಕಾರ್ಮಿಕ ಇಲಾಖೆ ಮತ್ತು ರಾಜ್ಯ ಅಸಂಘಟಿತ ಕಾರ್ಮಿಕರಸಾಮಾಜಿಕಭದ್ರತಾಮಂಡಳಿಯಿಂದ ಅಂಬೇಡ್ಕರ್‌ಕಾರ್ಮಿಕ ಸಹಾಯಹಸ್ತ ಯೋಜನೆಯಡಿ ಅಸಂಘಟಿತ ಕಾರ್ಮಿಕ ಮತ್ತು ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿಯಡಿ ಫಲಾನುಭವಿಗಳ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಸಂಘಟಿತ ಕಾರ್ಮಿಕರು ಶ್ರಮ ಜೀವಿಗಳು. ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಅಸ್ತಿತ್ವಕ್ಕೆ ಬರುವಲ್ಲಿ ಅವರೆಲ್ಲರ ಆಶೀರ್ವಾದವೂ ಇದೆ. ಹೀಗಾಗಿ ಅಸಂಘಟಿತ ಕಾರ್ಮಿಕರ ಹಿತ ಕಾಯಲು ಸರ್ಕಾರ ಬದ್ಧವಾಗಿದೆ. ಅವರ ಶ್ರೇಯೋಭಿವೃದ್ಧಿಗಾಗಿ ಹಲವು ಯೋಜನೆಗಳನ್ನು ರೂಪಿಸಿ ಮನೆ ಬಾಗಿಲಿಗೆ ತಲುಪಿಸುವ ಕೆಲಸ ಮಾಡುತ್ತಿದೆ. ಅರ್ಹ ಫಲಾನುಭವಿಗಳಿಗೆ ವಂಚಿತರಾಗದಂತೆ ಎಚ್ಚರ ವಹಿಸಬೇಕು ಎಂದರು.

ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮೂಲಕ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಪ್ರಾರಂಭಿಕವಾಗಿ 26 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಮಾತ್ರ ನೊಂದಾಯಿಸಲಾಗುತ್ತಿತ್ತು. ಸರ್ಕಾರ ವಿಶೇಷವಾಗಿ ಮುತುವರ್ಜಿ ವಹಿಸಿ ಅದನ್ನು ಇತರೆ ವರ್ಗಗಳಿಗೂ ವಿಸ್ತರಿಸಿದೆ ಎಂದರು.



ಶಾಸಕ ಇಕ್ಬಾಲ್ ಹುಸೇನ್ ಅಸಂಘಟಿತ ಕಾರ್ಮಿಕರಿಗೆ ಸವಲತ್ತುಗಳನ್ನು ವಿತರಿಸಿದರು.

ಈಗ ಹೊಸದಾಗಿ ಹಿಂದಳುದ ವರ್ಗಗಳ ಪ್ರವರ್ಗ -1, 2 ಎ, 3 ಎ ಮತ್ತು 3 ಬಿಗೆ ಸೇರಿದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ 38 ವರ್ಗಗಳು ಹಾಗೂ ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡದ ಕುಲಕಸುಬಿನಲ್ಲಿ ತೊಡಗಿರುವ 27 ವರ್ಗಗಳ ಕಾರ್ಮಿಕರು ಸೇರಿದಂತೆ ಒಟ್ಟಾರೆ 91 ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ ಸೌಲಭ್ಯಗಳನ್ನೊಳಗೊಂಡ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ ಎಂದರು.

ಈ ಯೋಜನೆಯಡಿ ನೋಂದಾಯಿತ ಕಾರ್ಮಿಕ ಅಪಘಾತದಲ್ಲಿ ಮರಣ ಹೊಂದಿದರೆ ನಾಮ ನಿರ್ದೇಶಿತರಿಗೆ 1 ಲಕ್ಷ ಪರಿಹಾರ, ಭಾಗಶಃ - ಶಾಶ್ವತ ದುರ್ಬಲತೆ ಹೊಂದಿದರೆ 1 ಲಕ್ಷ ಪರಿಹಾರ, ಆಸ್ಪತ್ರೆ ವೆಚ್ಚಕ್ಕಾಗಿ 50 ಸಾವಿರ , ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚಕ್ಕಾಗಿ 10 ಸಾವಿರ ರು.ಧನ ಸಹಾಯ ಮಾಡಲಾಗುತ್ತದೆ. ಎಲ್ಲ ಅಸಂಘಟಿತ ಕಾರ್ಮಿಕರು ನೋಂದಣಿ ಮಾಡಿಸಿಕೊಂಡು ಸ್ಮಾರ್ಟ್ ಕಾರ್ಡ್ ಪಡೆದುಕೊಳ್ಳಬೇಕು ಎಂದು ಹೇಳಿದರು.

ಶ್ರಮಿಕ ವಸತಿ ಶಾಲೆ ಪ್ರಾರಂಭ: ಅಸಂಘಟಿತ ಕಾರ್ಮಿಕರ ಕಸುಬಿಗೆ ಅನುಗುಣವಾಗಿ ಕಿಟ್‌ಗಳನ್ನು ವಿತರಿಸಲಾಗುತ್ತಿದ್ದು, ಅವರ ಮಕ್ಕಳ ಶಿಕ್ಷಣಕ್ಕೂ ಹೆಚ್ಚಿನ ಒತ್ತು ಕೊಡಲಾಗುತ್ತಿದೆ. ಇನ್ನು ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕಾಗಿ ರಾಮನಗರದಲ್ಲಿಯೂ ಶ್ರಮಿಕ ವಸತಿ ಶಾಲೆ ತೆರೆಯಲಾಗುತ್ತಿದೆ ಎಂದು ಹೇಳಿದರು.

ಬಡವರು, ರೈತರು, ಕೂಲಿ ಕಾರ್ಮಿಕರೆಲ್ಲರ ಪ್ರಾರ್ಥನೆ ಫಲವಾಗಿ ನಾನು ಶಾಸಕನಾಗಿ ಆಯ್ಕೆಯಾಗಿದ್ದೇನೆ.ಈಹಿಂದೆಶಾಸಕರಾಗಿದ್ದವರು ನಿಮ್ಮ ಕಷ್ಟ ಸುಖವನ್ನು ಯಾರೂ ಕೇಳಲಿಲ್ಲ. ಆದರೆ,ನಾನುನಿಮ್ಮಮನೆಮಗ,ಸಹೋದರನಾಗಿ ಕ್ಷೇತ್ರ ದಲ್ಲಿ ಕೆಲಸ ಮಾಡುತ್ತಿದ್ದೇನೆ. ನಿಮ್ಮೆಲ್ಲರ ಆಶಯದಂತೆ ನವ ರಾಮನಗರ ನಿರ್ಮಾಣಕ್ಕಾಗಿ ಶ್ರಮಿಸುತ್ತಿದ್ದೇನೆ ಎಂದು ತಿಳಿಸಿದರು.

ರಾಮನಗರದಲ್ಲಿ ಅರ್ಹ ಬಡವರಿಗೆ 10 ಸಾವಿರ ನಿವೇಶನಗಳನ್ನು ಒದಗಿಸಲು ಉದ್ದೇಶಿಸಿದ್ದು, ಇದಕ್ಕಾಗಿ 13 ಸಾವಿರ ಅರ್ಜಿಗಳು ಬಂದಿವೆ. ಶಿಡ್ಲಕಲ್ಲು ಬಳಿ 888 ನಿವೇಶನಗಳ ರಚನೆಗೆ ಭೂಮಿ ಪೂಜೆ ನೆರವೇರಿಸಲಾಗುತ್ತಿದೆ. ಆಶ್ರಯ ಸಮಿತಿ ಆಯ್ಕೆ ಮಾಡಿದ ಅರ್ಹ ಬಡವರಿಗೆ ನಿವೇಶನ ಒದಗಿಸುತ್ತೇವೆ ಎಂದು ತಿಳಿಸಿದರು.

ನಿರುದ್ಯೋಗಿ ಯುವಕರಿಗೆ ಉದ್ಯೋಗ ಮೇಳದ ಮೂಲಕ ಉದ್ಯೋಗಾವಕಾಶ ಕಲ್ಪಿಸಿದೆವು. ಅಲ್ಪಸಂಖ್ಯಾತರ ಸಮುದಾಯದ ಬಡ ಕುಟುಂಬಗಳ ಹೆಣ್ಣು ಮಕ್ಕಳ ಸಾಮೂಹಿಕ ವಿವಾಹ ನೆರವೇರಿಸಿದೆವು. ಮುಂದಿನ ದಿನಗಳಲ್ಲಿ ಮತ್ತೆ 150 ಜೋಡಿಗಳ ಸಾಮೂಹಿಕ ವಿವಾಹ ಆಯೋಜಿಸಲಾಗುವುದು ಎಂದು ಇಕ್ಬಾಲ್ ಹುಸೇನ್ ಹೇಳಿದರು.

ಇದೇ ವೇಳೆ 50 ಮಂದಿ ಕಟ್ಟಡ ಕಾರ್ಮಿಕರು, 30 ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್, 30 ಮಂದಿ ಕಟ್ಟಡ ಕಾರ್ಮಿಕರಿಗೆ ವಿವಿಧ ಕಿಟ್, 5 ಕಟ್ಟಡ ಕಾರ್ಮಿಕರಿಗೆ ಮದುವೆ ಧನ ಸಹಾಯ ಬಾಂಡ್ ಗಳನ್ನು ಶಾಸಕರು ವಿತರಿಸಿದರು.

ಕಾರ್ಯಕ್ರಮದಲ್ಲಿ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಚೇತನ್ ಕುಮಾರ್, ಮಾಜಿ ಅಧ್ಯಕ್ಷ ಸಿಎನ್‌ಆರ್‌ವೆಂಕಟೇಶ್, ಕಾರ್ಮಿಕ ಅಧಿಕಾರಿ ನಾಗೇಂದ್ರ, ಕಾರ್ಮಿಕ ನಿರೀಕ್ಷಕ ಪ್ರದೀಪ್, ಮುಖಂಡರಾದ ಮತೀನ್ ಪಾಷ, ಗುರುವೇಗೌಡ, ಪ್ರಕಾಶ್ ಹಾಗೂ ಸ್ಥಳೀಯ ಮುಖಂಡರು ಮೊದಲಾದವರು ಉಪಸ್ಥಿತರಿದ್ದರು.

ವಜ್ರ ವಿಸ್ತಾರ ಸಾರಿಗೆ ಸೇವೆಗೆ ಚಾಲನೆ



ಚನ್ನಪಟ್ಟಣ: ಕೆಂಪೇಗೌಡ ಬಸ್ ನಿಲ್ದಾಣದಿಂದ ರಾಮನಗರಕ್ಕೆ ಈಗಾಗಲೇ ಸಂಚರಿಸುತ್ತಿರುವ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಜ್ರ ವಿಸ್ತಾರ ಹವಾನಿಯಂತ್ರಿತ ಸಾರಿಗೆ ಬಸ್‌ಗಳನ್ನು ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಚನ್ನಪಟ್ಟಣದವರೆಗೆ ವಿಸ್ತರಿಸಲಾಗಿದೆ ಎಂದು ಶಾಸಕ ಯೋಗೇಶ್ವರ್ ತಿಳಿಸಿದರು.

ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಕೆಂಪೇಗೌಡ ಬಸ್ ನಿಲ್ದಾಣ-ರಾಮನಗರಕ್ಕೆ ಸಂಚರಿಸುತ್ತಿದ್ದ ವಜ್ರ ವಿಸ್ತಾರ ಹವಾನಿಯಂತ್ರಿತ ಸಾರಿಗೆ ಸೇವೆಯನ್ನು ಚನ್ನಪಟ್ಟಣದವರೆಗೆ ವಿಸ್ತರಿಸಿದ ಮಾರ್ಗಗಳನ್ನು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಜತೆ ಉದ್ಘಾಟಿಸಿ ಅವರು ಮಾತನಾಡಿದರು.

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಬೆಂಗಳೂರು ನಗರ ಹಾಗೂ ಹೊರವಲಯದ ಪ್ರಯಾಣಿಕರಿಗೆ ಗುಣಮಟ್ಟದ ಸಾರಿಗೆ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ 50 ಘಟಕಗಳಿಂದ ವಿವಿಧ ಮಾದರಿಯ ಬಸ್ಸುಗಳಲ್ಲಿ ಪ್ರತಿ ದಿನ 6,275 ಅನುಸೂಚಿಗಳಿಂದ 65, 952 ಸುತ್ತುವಳಿಗಳನ್ನು 13.06 ಲಕ್ಷ ಕಿ.ಮೀ ಗಳಲ್ಲಿ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದ್ದು, ಸರಾಸರಿ 45 ಲಕ್ಷ ಪ್ರಯಾಣಿಕರು ಸಂಸ್ಥೆಯ ಸಾರಿಗೆ ಸೌಲಭ್ಯವನ್ನು ಪಡೆದುಕೊಳ್ಳುತ್ತಿದ್ದಾರೆ. ಈ ಅನುಸೂಚಿಗಳಲ್ಲಿ 1,757 ಎಲೆಕ್ಟ್ರಿಕ್ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದರು.

ಈ ವೇಳೆ ನಗರಸಭೆ ಅಧ್ಯಕ್ಷ ನಾಗೇಶ್, ಚನ್ನಪಟ್ಟಣ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್.ಪ್ರಮೋದ್, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷ ಎಸ್.ಗಂಗಾಧರ್, ಗ್ಯಾರೆಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಬೋರ್‌ವೆಲ್ ರಂಗನಾಥ್, ಹಾಪ್‌ಕಾಮ್ಸ್ ನಿರ್ದೇಶಕ ಪ್ರದೀಪ್ ಕುಮಾರ್, ನಗರಸಭೆ ಅಧ್ಯಕ್ಷ ನಾಗೇಶ್, ನಗರಸಭೆ ಮಾಜಿ ಅಧ್ಯಕ್ಷ ವಾಸೀಲ್ ಅಲಿಕಾನ್, ಕಾಂಗ್ರೆಸ್ ಅಧ್ಯಕ್ಷ ಸುನಿಲ್, ಸಾರಿಗೆ ಅಧಿಕಾರಿ ಪುರುಷೋತ್ತಮ್ ಇತರರಿದ್ದರು.

ವಿಶ್ವಗುರು ಬಸವಣ್ಣನವರು ಸಮಾನತೆ, ಕಾಯಕ ಮತ್ತು ದಾಸೋಹ ತತ್ವಗಳ ಮೂಲಕ ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದವರು. ಅನುಭವ ಮಂಟಪದ ಮೂಲಕ ಜಗತ್ತಿನ ಮೊದಲ ಸಂಸತ್ತಿನ ಪರಿಕಲ್ಪನೆ ನೀಡಿ, ಶರಣರ ವೈಚಾರಿಕ ಚಿಂತನೆಗಳಿಗೆ ವೇದಿಕೆ ಕಲ್ಪಿಸಿದರು. ಅವರ ವಿಚಾರಧಾರೆ ನಿರಂತರವಾಗಿ ಇರಬೇಕೆಂದು ಪುತ್ಥಳಿ ಅನಾವರಣ ಮಾಡಿದ್ದೇವೆ.

• **ಕೆ. ಶೇಷಾದ್ರಿ,** ಅಧ್ಯಕ್ಷರು, ನಗರಸಭೆ, ರಾಮನಗರ

ವಚನ-ಸಂವಿಧಾನ ಒಟ್ಟಾಗಿ ಹೋದರೆ ಕಲ್ಯಾಣ ರಾಜ್ಯ

ನಿವೃತ್ತ ನ್ಯಾಯಾಧೀಶರಾದ ನಾಗಮೋಹನ್ ದಾಸ್ ಅಭಿಮತ | ಬಸವ ಜಯಂತಿ | ರಾಮನಗರ ನಗರಸಭೆ ಆವರಣದಲ್ಲಿ ಬಸವಣ್ಣರ ಪುತ್ಥಳಿ ಅನಾವರಣ

• **ಕನ್ನಡಪ್ರಭ ವಾರ್ತೆ** ರಾಮನಗರ

12ನೇಶತಮಾನದಲ್ಲಿಶರಣರುಪ್ರತಿಪಾದಿಸಿದ ತತ್ವಗಳನ್ನು ಸಂವಿಧಾನದಲ್ಲಿಯೂ ಕಾಣುತ್ತಿದ್ದೇವೆ. ವಚನಗಳು ಬದುಕಿಗೆ ನೈತಿಕ ಚೌಕಟ್ಟು ಮತ್ತು ಸಂವಿಧಾನ ಕಾನೂನಿನ ಚೌಕಟ್ಟು ಕಲ್ಪಿಸುತ್ತದೆ. ಇವರೆಡು ಒಟ್ಟಿಗೆ ಹೋದಾಗ ಮಾತ್ರ ಕಲ್ಯಾಣ ರಾಜ್ಯ ಸ್ಥಾಪನೆ ಸಾಧ್ಯವಾಗಲಿದೆ ಎಂದುನಿವೃತ್ತನ್ಯಾಯಾಧೀಶನಾಗಮೋಹನ್ ದಾಸ್ ಪ್ರತಿಪಾದಿಸಿದರು.

ನಗರಸಭೆ ಆವರಣದಲ್ಲಿ ಹಮ್ಮಿಕೊಂಡಿದ್ದ ಬಸವ ಜಯಂತಿಯಲ್ಲಿ ಮಾತನಾಡಿದ ಅವರು, 12ನೇ ಶತಮಾನದ ಎಲ್ಲ ವಚನಕಾರರ ಅಂತಿಮ ಗುರಿ ಜಾತಿ, ಲಿಂಗ, ವರ್ಗ ಬೇಧವಿಲ್ಲದ ಸಮ ಸಮಾಜದ ನಿರ್ಮಾಣವಾಗಿತ್ತು. 20ನೇ ಶತಮಾನದಲ್ಲಿ ರಚನೆಯಾದ ಸಂವಿಧಾನದ ಆಶಯಗಳೂ ಇದೆ ಆಗಿತ್ತು. ವಚನಕಾರರು ಪ್ರಜಾಪ್ರಭುತ್ವ, ಜಾತ್ಯತೀತ ಹಾಗೂ ಸಾಮಾಜಿಕ ನ್ಯಾಯದ ತತ್ವಗಳನ್ನು ಪ್ರತಿಪಾದಿಸಿ, ಅನುಷ್ಠಾನಗೊಳಿಸಿದರು.



ರಾಮನಗರ ನಗರಸಭೆ ಆವರಣದಲ್ಲಿ ಶ್ರೀ ಬಸವೇಶ್ವರರ ಪುತ್ಥಳಿಯನ್ನು ಸುತ್ತೂರು ಮಹಾಸಂಸ್ಥಾನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅನಾವರಣಗೊಳಿಸಿದರು.

ಅಂತಹದೇ ಕೆಲಸವನ್ನು 20ನೇ ಶತ ಮಾನದಲ್ಲಿ ಭಾರತದ ಸಂವಿಧಾನದಲ್ಲಿ ಕಾಣುತ್ತಿದ್ದೇವೆ. ಸಂವಿಧಾನ ಜಾರಿಯಾದ ಮೇಲೆ ರಾಜತ್ವ, ಪಾಳೆಗಾರಿಕೆ ರದ್ದುಗೊಂಡಿತು ಎಂದರು.

ನಮಗೆ ಬೇಕಿರುವುದು ಬಸವಣ್ಣ, ಅಂಬೇಡ್ಕರ್ ಹಾಗೂ ಸಂವಿಧಾನದ ಅಮಲಲ್ಲ. ಅವುಗಳ ಅರಿವು ಬೇಕಿದೆ. ಇಂದು ಬಸವಣ್ಣ, ಅಂಬೇಡ್ಕರ್, ಕುವೆಂಪು ಫೋಟೋ ಇಟ್ಟುಕೊಂಡು ಜಾತಿ ರಾಜಕಾರಣ ಮಾಡುತ್ತಾರೆ. ಆ ದಾರ್ಶನಿಕರು ಒಂದು ಜಾತಿಗೆ ಸೀಮಿತರಲ್ಲ ಎಲ್ಲ ಜಾತಿ ಧರ್ಮಗಳ ಜನರ ಚೌಕಟ್ಟನ್ನು ಮೀರಿ ಜಗತ್ತಿನ ಮನಕುಲಕ್ಕೆ ಸಂದೇಶ ನೀಡಿದವರು. ಆ ಸಂದೇಶಗಳು ಇಡೀ ಮನುಕುಲದ ಎಲ್ಲ ಕಾಲಕ್ಕೂ ಪ್ರಸ್ತುತವಾಗಿರಲಿವೆ ಎಂದು ನಾಗಮೋಹನ್ ದಾಸ್ ಹೇಳಿದರು.

ವಿಕಸಿತ ಸಮಾಜ ಸುಧಾರಣೆ: ಬಸವಣ್ಣನವರ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದ ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿಶ್ವ ಗುರು ಬಸವಣ್ಣ ಧಾರ್ಮಿಕ ನೆಲೆಗಟ್ಟನ್ನು ಮುಖ್ಯವಾಗಿಟ್ಟುಕೊಂಡು ಮಾಡಿದ ಕ್ರಾಂತಿ ವಿಕಸಿತ ಸಮಾಜವನ್ನು ಸುಧಾರಣೆ ಮಾಡುತ್ತಿದೆ.

ಬಸವಣ್ಣರವರ ಸಾಮಾಜಿಕ ಸುಧಾರಣೆಗಳು ಕೇವಲ ಲೌಕಿಕ, ಸಾಮಾಜಿಕ ಹಾಗೂ ಮೇಲುಸ್ತರದಲ್ಲಿನಡೆದಿದ್ದು ಅಲ್ಲ. ಮನುಷ್ಯನ ಶ್ರೇಯಸ್ಸಿಗೆ ಮೋಕ್ಷ ಸಾಧನೆ, ಧಾರ್ಮಿಕ ಪ್ರಜ್ಞೆ, ಆಧ್ಯಾತ್ಮಿಕ ನಡವಳಿಕೆ ಎಲ್ಲವನ್ನು ಒಟ್ಟುಗೂಡಿಸಿ ಸಮಗ್ರ ಬದಲಾವಣೆ ಆಗಬೇಕೆಂದು ಧಾರ್ಮಿಕ ತಳಹದಿ ಮೇಲೆ ಸಾಮಾಜಿಕ ಸುಧಾರಣೆ ತರಲು ಬಯಸಿದವರೆಂದರು.

ಬಸವಣ್ಣ ಜಗತ್ತು ಕಂಡ ಶ್ರೇಷ್ಠ ಸಂತರು. ಅವರ ವಚನಗಳು ಬಹುಶ ಲಭ್ಯವಾಗದಿದ್ದರೆ ಬಸವಣ್ಣ ಪೌರಾಣಿಕ ವ್ಯಕ್ತಿಯಾಗಿ ಉಳಿದು ಬಿಡುತ್ತಿದ್ದರು. ರಹಸ್ಯವಾಗ ಬಹುದಾಗಿದ್ದ ವಚನಗಳನ್ನು ಶರಣರು ಕಾಪಾಡಿದ ಕಾರಣದಿಂದ ಬಸವಣ್ಣರವರ ವ್ಯಕ್ತಿತ್ವವನ್ನು ಪ್ರತ್ಯಕ್ಷವಾಗಿ ದರ್ಶನ ಮಾಡುವ ಅವಕಾಶ ಸಿಕ್ಕಿದಂತಾಗಿದೆ ಎಂದು ತಿಳಿಸಿದರು.

ಕನಕಪುರ ದೇಗುಲ ಮಠದ ಮುಮ್ಮಡಿ ನಿರ್ವಾಣ ಸ್ವಾಮೀಜಿ, ಮರಳೇಗವಿ ಮಠದ ಶಿವರುದ್ರಸ್ವಾಮೀಜಿ, ನಗರಸಭೆ ಅಧ್ಯಕ್ಷ ಶೇಷಾದ್ರಿ, ಉಪಾಧ್ಯಕ್ಷೆ ಗಿರಿಜಮ್ಮ, ಮಾಜಿ ಶಾಸಕ ಸಿ.ಎಂ.ಲಿಂಗಪ್ಪ, ಎಚ್.ಎಂ.ರೇವಣ್ಣ, ಕೆಎಂಎಫ್ ಮಾಜಿ ಅಧ್ಯಕ್ಷ ನಾಗರಾಜು, ಜಿಲ್ಲಾಧಿಕಾರಿ ಯಶ್ವಂತ್ ವಿ ಗುರುಕರ್, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೆ. ಸತೀಶ್, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಯರೇಹಳ್ಳಿ ಮಂಜು, ಗ್ಯಾರಂಟಿ ಯೋಜನೆ ತಾಲೂಕು ಅಧ್ಯಕ್ಷ ವಿ.ಎಚ್.ರಾಜು, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಆರೀಫ್, ಪೌರಾಯುಕ್ತ ಡಾ.ಜಯಣ್ಣ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಯೋಗಾನಂದ, ತಾಲೂಕು ಅಧ್ಯಕ್ಷ ಶಂಕರಪ್ಪ ಮತ್ತಿತರರಿದ್ದರು.

ದೇಶಕ್ಕೆ ರಾಮನಗರ ನಗರಸಭೆ ಮಾದರಿ

ರಾಮನಗರ: ನಗರಸಭೆ ಆವರಣದಲ್ಲಿ ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಪುತ್ಥಳಿ, ಸಂವಿಧಾನ ಪೀಠಿಕೆ ಅಳವಡಿಸಿ ಗಮನ ಸೆಳೆದಿದ್ದ ರಾಮನಗರ ನಗರಸಭೆ ಆವರಣದಲ್ಲಿ ಶುಕ್ರವಾರ ವಿಶ್ವಗುರು ಶ್ರೀ ಬಸವೇಶ್ವರರ ಪುತ್ಥಳಿ ಅನಾವರಣಗೊಂಡಿತು.

ಸುತ್ತೂರು ಮಹಾಸಂಸ್ಥಾನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹಾಗೂ ನಿವೃತ್ತ ನ್ಯಾಯಾಧೀಶ ನಾಗಮೋಹನ್ ದಾಸ್ ಬಸವಣ್ಣರವರ ಪುತ್ಥಳಿಯನ್ನು ಅನಾವರಣಗೊಳಿಸಿದರು. ಇದಕ್ಕೆ ವಿವಿಧ ಮಠಗಳ ಶ್ರೀಗಳು, ಜನಪ್ರತಿನಿಧಿಗಳು, ಸಮುದಾಯದ ಮುಖಂಡರು ಹಾಗೂ ಅಧಿಕಾರಿ ವರ್ಗ ಸಾಕ್ಷಿಯಾದರು.

ನಿವೃತ್ತ ನ್ಯಾಯಾಧೀಶ ನಾಗಮೋಹನ್ ದಾಸ್ ಮಾತನಾಡಿ, ರಾಮನಗರ ನಗರಸಭೆ ದೇಶದ ಎಲ್ಲ ನಗರಸಭೆಗಳಿಗೆ ಮಾದರಿ. ಅಧ್ಯಕ್ಷರು, ಸದಸ್ಯರು, ಅಧಿಕಾರಿ ವರ್ಗಕ್ಕೆ ವಿಶೇಷವಾಗಿ ಅಭಿನಂದಿಸುತ್ತೇನೆ ಎಂದರು.

ಸಂವಿಧಾನ-ವಚನ ಸಾಹಿತ್ಯದ ಸಂದೇಶ ಸಾರುವ ಕೆಲಸವನ್ನು ನಗರಸಭೆ ಯಶಸ್ವಿಯಾಗಿ ಮಾಡುವಲ್ಲಿ ನಗರಸಭೆ ಅಧ್ಯಕ್ಷ ಶೇಷಾದ್ರಿ ಮುನ್ನಡೆಯಲಿ ಎಂದು ಹಾರೈಸಿದರು.



ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿ, ರಾಮನಗರದ ಇತಿಹಾಸದಲ್ಲಿ ಮರೆಯಲಾಗದ ವಿಶೇಷ ಕ್ಷಣಗಳಿಗೆ ಸಾಕ್ಷಿಯಾಗಿದ್ದೇವೆ. ನಗರಸಭೆ ಕಚೇರಿ ಪ್ರವೇಶಿಸಿದ ಕೂಡಲೇ ಅಂಬೇಡ್ಕರರ ದರ್ಶನವಾಗುತ್ತದೆ. ನಂತರ ಸಂವಿಧಾನ ಪೀಠಿಕೆ ಓದಲು ಪ್ರೇರೇಪಿಸುತ್ತದೆ. ಈಗ ಬಸವಣ್ಣರ ಪುತ್ಥಳಿ ಸ್ಥಾಪಿಸಿ ಆಶೀರ್ವಾದ ಸಿಗುವಂತೆ ಮಾಡಿದ್ದಾರೆ. ಕಟ್ಟಕಡೆಯ ಸಮುದಾಯದ ಜನರನ್ನು ಗುರುತಿಸಿ ಸವಲತ್ತು ಒದಗಿಸುವಲ್ಲಿ ಅಧ್ಯಕ್ಷ ಶೇಷಾದ್ರಿ ಅವರ ಕೆಲಸ ಶ್ಲಾಘನೀಯ ಎಂದರು.

ಪುರಸಭಾ ಕಾರ್ಯಾಲಯ, ಬಿಡದಿ
ಬಿಡದಿ ಮುಖ್ಯ ರಸ್ತೆ, ರಾಮನಗರ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ – 562109
ದೂರವಾಣಿ : 080–27282572 e-mail: ka.bidadi.tmc@gmail.com
website: http://www.bidaditown.mrc.gov.in

ಸಂ: ಪುಕಾಬಿ/ಆ.ಶಾ/ಇ–ಟೆಂಡರ್/ಸಿಆರ್/02/2025–26 ದಿನಾಂಕ: 08.05.2026

ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ (ಕೆ.ಪಿ.ಪಿ.ಪಿ. ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್‌ನ ಕೆ.ಪಿ.ಪಿ.ಪಿ. ಪೋರ್ಟಲ್ ಮುಖಾಂತರ **ಪುರಸಭಾ ನಿಧಿ ಅನುದಾನದಡಿ** ಟೆಂಡರ್‌ನ್ನು ಆಹ್ವಾನಿಸಿದ್ದು. ಅರ್ಹ ಗುತ್ತಿಗೆದಾರರು ಕೆ.ಪಿ.ಪಿ.ಪಿ ಪೋರ್ಟಲ್ **https://kppp.karnataka.gov.in** ಮುಖಾಂತರ ಕರೆದಿರುವ ಟೆಂಡರ್‌ನಲ್ಲಿ ಭಾಗವಹಿಸಬಹುದು. ಮುಂದುವರೆದಂತೆ ಇಂಡೆಂಟ್ ನಂ ಹಾಗೂ ಅಂದಾಜು ಮೊತ್ತಗಳಂತೆ **(1)** DMA/2025-26/SE5674/CALL-3 (Other, **73.54 Lakhs** EMD - **147082/-**) ಗಳಿದ್ದು, ಕೆ.ಪಿ.ಪಿ.ಪಿ. ಪೋರ್ಟಲ್ **https://kppp.karnataka.gov.in** ಮುಖಾಂತರ ಡೌನ್‌ಲೋಡ್ ಮಾಡಿಕೊಂಡು **ದಿನಾಂಕ: 16.05.2026ರ ಸಂಜೆ 5:30 ಗಂಟೆ ಒಳಗಾಗಿ ಅಪ್‌ಲೋಡ್** ಮಾಡಬಹುದಾಗಿರುತ್ತದೆ. ಟೆಂಡರ್ ದಾಖಲೆಗಳಲ್ಲಿ ತಿಳಿಸಿರುವಂತೆ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಹೆಚ್ಚಿನ ವಿವರಗಳನ್ನು ಈ ಕಛೇರಿಯ ಆರೋಗ್ಯ ಶಾಖೆಯಿಂದ ಪಡೆಯಬಹುದು.

ಸಹಿ/– **ಅಧ್ಯಕ್ಷರು**, ಪುರಸಭೆ, ಬಿಡದಿ
ಸಹಿ/– **ಮುಖ್ಯಾಧಿಕಾರಿ**, ಪುರಸಭೆ, ಬಿಡದಿ
DIPR/BSD/51/SA/2026-27

ಕರ್ನಾಟಕ ಸರ್ಕಾರ
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ
6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003.
ದೂರವಾಣಿ: 080–23349434, e-mail: dpikseab@gmail.com
ಸಂಖ್ಯೆ: KSEAB/DPIE/B4(OTR)/1/2026-BSEC/90135 ದಿನಾಂಕ: 08.05.2026

ಇ–ಟೆಂಡರ್ ಪ್ರಕಟಣೆ

ನಿರ್ದೇಶಕರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಇವರು **"2026 ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಇತರೆ ಪರೀಕ್ಷೆಗಳ ಪೂರ್ವ ಮುದ್ರಿತ ಉತ್ತೀರ್ಣ ಪ್ರಮಾಣಪತ್ರಗಳು, ಪರಿವರ್ತನೀಯ ದತ್ತಾಂಶಗಳ ಮೇಲುಮುದ್ರಣ ಸಹಿತ ಸರಬರಾಜು"** ಕಾರ್ಯಕ್ಕೆ ಅರ್ಹ ಸಂಸ್ಥೆಗಳಿಂದ ಇ–ಟೆಂಡರ್ ಅರ್ಜಿಗಳನ್ನು ಕೆ.ಟಿ.ಪಿ.ಪಿ. ಅಧಿನಿಯಮ–1999 ಮತ್ತು ಕೆ.ಟಿ.ಪಿ.ಪಿ. ನಿಯಮಗಳು–2000, ಅಡಿಯಲ್ಲಿ ಆಹ್ವಾನಿಸಲಾಗಿದೆ.

ಟೆಂಡರ್‌ಗಳನ್ನು ಕರ್ನಾಟಕ ಸರ್ಕಾರದ ಇ–ಸಂಗ್ರಹಣಾ ವೇದಿಕೆ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಟೆಂಡರ್ ದಸ್ತಾವೇಜುಗಳನ್ನು ಮಂಡಲಿಯ ಅಂತರ್ಜಾಲತಾಣ **https://Kseab.karnataka.gov.in** ಮತ್ತು **https://kppp.karnataka.gov.in** ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಟೆಂಡರ್ ಪ್ರಾರಂಭ **ದಿನಾಂಕ: 08.05.2026,** ಟೆಂಡರ್ ಪೂರ್ವ ಬಿಡ್ ಸಭೆ **ದಿನಾಂಕ: 15.05.2026ರ ಪೂರ್ವಾಹ್ನ 11.30 ಗಂಟೆ,** ಟೆಂಡರ್ ಸಲ್ಲಿಸಲು ಅಂತಿಮ **ದಿನಾಂಕ: 22.05.2026ರ ಸಂಜೆ 5.00 ಗಂಟೆ.** ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 25.05.2026ರ ಪೂರ್ವಾಹ್ನ 11.30 ಗಂಟೆ,** ವಾಣಿಜ್ಯ ಬಿಡ್ ತೆರೆಯುವ ತಾತ್ಕಾಲಿಕ **ದಿನಾಂಕ: 27.05.2026 ಪೂರ್ವಾಹ್ನ 11.30 ಗಂಟೆ,** ಸದರೀ ಟೆಂಡರ್‌ನ ಅಂದಾಜು ಮೌಲ್ಯ **ರೂ.30,14,000/–** ಮತ್ತು ಮುಂಗಡ ಠೇವಣಿ **ರೂ.60,280/– ಗಳಾಗಿದ್ದು** ಹೆಚ್ಚಿನ ವಿವರಗಳನ್ನು ಮಂಡಲಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

ಸಹಿ/– ನಿರ್ದೇಶಕರು, ಪರೀಕ್ಷೆಗಳು

ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ನಂ.45, 3ನೇ ಮಹಡಿ, ಕೆ.ಎಸ್.ಹೆಚ್.ಡಿ.ಸಿ.ಎಲ್ ಕಾಂಪ್ಲೆಕ್ಸ್, ಎಂ.ಜಿ.ರಸ್ತೆ, ಬೆಂಗಳೂರು–01. ದೂ: 080–25582656/ 71204445/ 71204446
ಇ–ಮೇಲ್: gmmkshdcl@gmail.com
ವೆಬ್‌ಸೈಟ್:http://www.cauverycrafts.com
ಕಡತದ ಸಂಖ್ಯೆ: ಕೆಎಸ್‌ಹೆಚ್‌ಡಿಸಿಎಲ್/ಎಂಕೆಟಿಜಿ/ಇ–ಟೆಂಡರ್/137/2026–27, ದಿನಾಂಕ: 08.05.2026
ಟೆಂಡರ್ ಉಲ್ಲೇಖ ಸಂಖ್ಯೆ: ಕೆಎಸ್‌ಹೆಚ್‌ಡಿಸಿಎಲ್/2026–27/ಐಎನ್‌ಡಿ0017

ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ

ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತವು (ಕೆಎಸ್‌ಹೆಚ್‌ಡಿಸಿಎಲ್) ಪ್ರಕಟಣೆಯಲ್ಲಿ ನಿರ್ದಿಷ್ಟಪಡಿಸಿರುವ ವಿವರಣೆಯಂತೆ ಅನುಮೋದನೆ ಮೇಲೆ ಮಾರಾಟದ (ಎಸ್‌ಒಎ) ಆಧಾರದ ಮೇಲೆ **ಚಿನ್ನದ ಲೇಪನ ಮಾಡಿದ, ಗಂಡಬೇರುಂಢ ಇರುವ 92.5 ಸ್ಟರ್ಲಿಂಗ್ ಬೆಳ್ಳಿ ಪದಕಗಳು ಜೊತೆಗೆ ಅಗತ್ಯ ಸಹಾಯಕ ಭಾಗಗಳ ತಯಾರಿಕೆ ಮತ್ತು ಸರಬರಾಜಿಗಾಗಿ** ಅರ್ಹ ಟೆಂಡರುದಾರರುಗಳಿಂದ ದ್ವಿ ಲಕೋಟೆ ಟೆಂಡರ್ ಕ್ರಮದಲ್ಲಿ ಅಲ್ಪಾವಧಿ ಇ–ಟೆಂಡರ್ ಆಹ್ವಾನಿಸಿರುವುದು. ಟೆಂಡರ್ ಪ್ರಕಟಣೆ ವಿವರಗಳನ್ನು ವೆಬ್‌ಸೈಟ್: **www.kppp.karnataka.gov.in** ಇಲ್ಲಿಗೆ ಲಾಗಿನ್ ಆಗುವ ಮೂಲಕ ಇ–ಪ್ರೊಕ್ಯೂರ್‌ಮೆಂಟ್ ವಿಧಾನದಲ್ಲಿ ಪಡೆದುಕೊಳ್ಳಬಹುದು. ಟೆಂಡರ್ ದಸ್ತಾವೇಜುಗಳನ್ನು ಪಡೆಯಲು ಪ್ರಾರಂಭವಾಗುವ **ದಿನಾಂಕ: 08.05.2026.** ಬಿಡ್‌ಗಳನ್ನು ಸಲ್ಲಿಸುವ ಕಡೆಯ ದಿನಾಂಕ ಮತ್ತು ಸಮಯ: **15.05.2026.**

ಸಹಿ/– ಪ್ರಧಾನ ವ್ಯವಸ್ಥಾಪಕರು (ಮಾರುಕಟ್ಟೆ)

ಕರ್ನಾಟಕ ಸರ್ಕಾರ ಕರ್ನಾಟಕ ಅರಣ್ಯ ಇಲಾಖೆ
ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾರವಾರ ಉಪ–ವಿಭಾಗ, ಕಾರವಾರ
ಎಂಜಿ ರಸ್ತೆ, ಕಾಜುಬಾಗ, ಕಾರವಾರ–581301. (ಉ.ಕ.)
ದೂರವಾಣಿ: 08382–226365 ಇ–ಮೇಲ್: acfkwr@gmail.com
ನಂ. ಒ3/ಸಅಸಂ/ವಿವ–/ಇ–ಮರುಟೆಂಡರ್–6/2025–26 ದಿನಾಂಕ: 02–05–2026

ಟೆಂಡರ್ ಪ್ರಕಟಣೆ

2026–27ನೇ ಸಾಲಿಗೆ ವಿವಿಧ ಯೋಜನೆಯಡಿ 2026ನೇ ಮಳೆಗಾಲದಲ್ಲಿ ನೆಡುತೋಪು ರಚನೆ / ನಿರ್ವಹಣೆ, ನರ್ಸರಿ ಕಾಮಗಾರಿ ಇತ್ಯಾದಿ ಕಾಮಗಾರಿ ಸಂಕ್ಷಿಪ್ತ ಇ–ಟೆಂಡರ ಕರೆಯಲಾಗಿರುತ್ತದೆ. ಮರು ಇ–ಟೆಂಡರ್ ಸ್ವೀಕರಿಸುವ ಕೊನೆಯ ದಿನಾಂಕ: 12–05–2026 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾರವಾರ ವಿಭಾಗ, ಕಾರವಾರ ರವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವದು. (ದೂರವಾಣಿ ಸಂಖ್ಯೆ: 08382–226365).

DIPR/KWR/KSMCA/113/26-27 Dt. 07.05.2026

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ
GTTC
ರಾಜಾಜಿನಗರ ಕೈಗಾರಿಕಾ ವಸಾಹತು, ಬೆಂಗಳೂರು–560 010.
ದೂ.ಸಂ.: 080–23152118/119, 23384303,
ಫ್ಯಾಕ್ಸ್: 080–23301683, ವೆಬ್‌ಸೈಟ್: https://gttc.karnataka.gov.in

ಎಲೆಕ್ಟ್ರಾನಿಕ್ ಟೆಂಡರ್ ಪ್ರಕಟಣೆ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು (ಜಿಟಿಟಿಸಿ), **ಟರ್ನ್ ಕೀ ಆಧಾರದ ಮೇಲೆ ಇಂಡಸ್ಟ್ರಿಯಲ್ ಕಂಟ್ರೋಲ್ ಸಿಸ್ಟಮ್ ಮತ್ತು ಆಟೋಮೇಷನ್‌ನಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರವನ್ನು ಸ್ಥಾಪಿಸಲು ಇ–ಟೆಂಡರ್ ಆಹ್ವಾನಿಸಿದೆ.** GTTC/MSDC/TENDER/ICS&ALab./BD-288/2025-26 ಇ–ಟೆಂಡರ್ ಮೂಲಕ ಆಫರ್‌ಗಳನ್ನು ಅಪ್‌ಲೋಡ್ ಮಾಡಲು **ಕೊನೆಯ ದಿನಾಂಕ: 10.06.2026.** ಇನ್ನಿತರೆ ವಿವರಗಳಿಗಾಗಿ ವೆಬ್‌ಸೈಟ್ **https:/kppp.Karnataka.gov.in**ಗೆ ಲಾಗ್‌ಆನ್ ಆಗಿ. **ಸಹಾಯವಾಣಿ ಸಂಖ್ಯೆ : +91 9240214000, +91 9240214001.**

ಸಹಿ/– ಟೆಂಡರ್ ಆಹ್ವಾನಿಸುವ ಪ್ರಾಧಿಕಾರ

ಪುರಸಭಾ ಕಾರ್ಯಾಲಯ, ಪಿರಿಯಾಪಟ್ಟಣ
ಮೈಸೂರು ಜಿಲ್ಲೆ – 571107, ದೂ: 08223–273036
ಇ–ಮೇಲ್: itstaff_ulb_periyapatna@yahoo.com
ಸಂಖ್ಯೆ: ಪಿಪುಸ/ಪ.ಅ/ಟೆಂಡರ್–01–04/2026–27 ದಿನಾಂಕ: 06.05.2026

ಮರು ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮೂಲಕ)

ಪಿರಿಯಾಪಟ್ಟಣ ಪುರಸಭೆಯ ವಿವಿಧ ಸೇವೆಗಳನ್ನು ಅರ್ಹರಿಂದ ಪಡೆಯಲು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು ಪ್ರತ್ಯೇಕವಾಗಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಟೆಂಡರ್‌ದಾರರು **https://kppp.karnataka.gov.in** ಪೋರ್ಟಲ್ ಮೂಲಕ ಟೆಂಡರ್ ಷರತ್ತು ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. **1)** ಟೆಂಡರ್‌ನ್ನು ಸಲ್ಲಿಸಲು ಕಡೆಯ **ದಿನಾಂಕ: 21.05.2026 ಸಂಜೆ 5:00 ಗಂಟೆಯವರೆಗೆ. 2)** ಟೆಂಡರ್ ತೆರೆಯುವ **ದಿನಾಂಕ: 22.05.2026ರ ಬೆಳಿಗ್ಗೆ 11.00 ಗಂಟೆಗೆ** ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.

ಕ್ರ ಸಂ.	ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇ.ಎಂ.ಡಿ ಮೊತ್ತ (ರೂ.ಗಳಲ್ಲಿ)	ಕಾಲಾವಧಿ
1	DMA/2026-27/SE7686/CALL-2	16.10	40250	12 ತಿಂಗಳು
2	DMA/2026-27/SE7671/CALL-2	6.38	15970	12 ತಿಂಗಳು

ಸೂಚನೆ: 1) ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಾದಲ್ಲಿ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಕೆಪಿಪಿಪಿ ಪೋರ್ಟಲ್‌ನಲ್ಲಿ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು ಗುತ್ತಿಗೆದಾರರು **https://kppp.karnataka.gov.in** ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/– ಮುಖ್ಯಾಧಿಕಾರಿ, ಪುರಸಭೆ, ಪಿರಿಯಾಪಟ್ಟಣ
DIPR/MYS/148/SA/2026-27

ಕರ್ನಾಟಕ ಸರ್ಕಾರ
ಕರ್ನಾಟಕ ಮೃಗಾಲಯ ಪ್ರಾಧಿಕಾರ
ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳವರ/ ಉಪ ನಿರ್ದೇಶಕರವರ ಕಾರ್ಯಾಲಯ ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ
ಇಮೇಲ್: dcf_tgulbarga@yahoo.co.in ಕಛೇರಿ ದೂ. ಸಂ. 08472-256601
ಸಂಖ್ಯೆ: ಉನಿ/ಕಿ.ಮೃ/ಹೊರಗುತ್ತಿಗೆ ನೌಕರರ/ಟೆಂಡರ್/ಸಿ.ಆರ್/2026–27 ದಿನಾಂಕ : 07–05–2026

:: ಅಲ್ಪಾವಧಿಯ ಇ–ಟೆಂಡರ್ ಪ್ರಕಟಣೆ ::

(**Karnataka Public Procurement Portal ನಡಿಯಲ್ಲಿ ಮಾತ್ರ**)

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಮಾನವ ಸಂಪನ್ಮೂಲ ಒದಗಿಸುವ ಟೆಂಡರನ್ನು Karnataka Public Procurement Portal ನಡಿಯಲ್ಲಿ ಆಹ್ವಾನಿಸಲಾಗಿದ್ದು. **ಸದರಿ ವಿವರ ಈ ಕೆಳಗಿನಂತಿವೆ.**
ವಿವರ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ರವರಿಂದ ಇ–ಟೆಂಡರ್ ಆಹ್ವಾನಿಸಲಾಗಿದೆ.
1) ಕಾಮಗಾರಿ : ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸಲು ಮಾನವ ಸಂಪನ್ಮೂಲ ಒದಗಿಸುವ ಟೆಂಡರ್, 2) ಟೆಂಡರ್‌ಗಿಟ್ಟ ಮೊತ್ತ : **ಕನಿಷ್ಠ ರೂ. 57.00 ಲಕ್ಷ, ಗರಿಷ್ಠ ರೂ. 57.00 ಲಕ್ಷ,** 3) ಲೆಕ್ಕ ಶೀರ್ಷಿಕೆ : ZAK, 4) ಅರ್ಹತೆ : As per tender documents, 5) ಟೆಂಡರ್‌ಗೆ ಸಂಬಂಧಿಸಿದಂತೆ, ಪ್ರಶ್ನೆಗಳು ಮತ್ತು ಸ್ಪಷ್ಟೀಕರಣ ಕೇಳಲು ಕೊನೆಯ ದಿನಾಂಕ : **13–05–2026 ಸಾಯಂಕಾಲ 4.00 ಗಂಟೆಗೆ,** 6) ತಾಂತ್ರಿಕ ಹಾಗೂ ಆರ್ಥಿಕ ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **14–05–2026 ಸಾಯಂಕಾಲ 4.00 ಗಂಟೆಗೆ,** 7) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **15–05–2026 ರಂದು ಸಾಯಂಕಾಲ 4.30 ಗಂಟೆಗೆ,** 8) ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **17–05–2026 ರಂದು ಸಾಯಂಕಾಲ 5.00 ಗಂಟೆಗೆ,** 9) ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ, ಎಸ್.ಬಿ. ಟೆಂಪಲ್ ರೋಡ, ಕಲಬುರಗಿ. 10) ಅಂತರಜಾಲ ತಾಣದ ವಿಳಾಸ : http:kppp.karnataka.gov.in

ಸಹಿ/– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು
ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ
ವಾ.ಸಾ.ಸಂ.ಇ/ಕಲಬುರಗಿ/102/ಕೆ.ಎಸ್.ಎಂ.ಸಿ.&ಎ/2026–27

ಕರ್ನಾಟಕ ಸರ್ಕಾರ
ಕಾರ್ಯಾಲಯ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೀದರ.
ಸಂ: ಕಾನಿಅ/ಪಂರಾಇಂವಿ/ಬೀದರ/ತಾಶಾ–2/2026–27/159 ದಿನಾಂಕ: 07.05.2026

ಅಲ್ಪಾವಧಿ ಟೆಂಡರ್ ಪ್ರಕಟಣೆ, (ಇ–ಪ್ರೊಕ್ಯೂರಮೆಂಟ್)

ಕರ್ನಾಟಕ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ ರಾಜ್ ಇಂಜಿನಿಯರಿಂಗ ವಿಭಾಗ, ಬೀದರ ಇವರಿಂದ ವಿವಿಧ ಯೋಜನೆಯಡಿ ಮಂಜೂರಾದ 27 ಕಾಮಗಾರಿಗಳಿಗೆ (ಕನಿಷ್ಟ **ರೂ. 4,15,820.42** (Rupees Four Lakhs Fifteen Thousand Eight Hundred Twenty and paise forty two only) ಮತ್ತು ಗರಿಷ್ಟ **167,84,805.38 ಮೊತ್ತದ** (Rupees One Crore Sixty Seven Lakhs Eighty Four Thousand Eight Hundred Five and paise thirty eight only) ಗುತ್ತಿಗೆದಾರರನ್ನು ನೇಮಿಸಲು, ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಕೆ.ಟಿ.ಪಿ.ಪಿ. ಕಾಯ್ದೆ ಹಾಗೂ ಕೆ.ಡಬ್ಲ್ಯೂ–01, 02, 03 ಹಾಗೂ 04ರ ನಿಬಂಧನೆಗೊಳಪಟ್ಟು ಕೆ.ಪಿ.ಪಿ.ಪಿ.ನಲ್ಲಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಅಂತರಜಾಲ ತಾಣ https://kppp.karnataka.gov.inನ್ನು ಸಂಪರ್ಕಿಸಬಹುದು.(Work Indent No:– 26578, 26406, 26564, 26561, 26547, 26013, 26247, 25188, 25189, 25190, 26293, 26291, 26289, 21574/CALL–2, 26405, 26546, 26545, 26442, 26441, 26440, 26439, 25393/CALL-2, 25447, 26548, 26580, 24965/CALL–2, 24968/CALL–2). ಟೆಂಡರ್ ಪ್ರಕ್ರಿಯೆ ದಿನಾಂಕಗಳು: 1. ಇ–ಪ್ರಾಕ್‌ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : 08.05.2026 ರಿಂದ 18.05.2026 16:00 ಗಂಟೆವರೆಗೆ 2. ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 19.05.2026 ರಂದು 16:00 ಗಂಟೆ ನಂತರ 3. ಅರ್ಥಿಕ ಬಿಡ್ ತೆರೆಯುವ ದಿನಾಂಕ : 22.05.2026 ರಂದು 11:00 ಗಂಟೆ ನಂತರ

ಸಹಿ/–ಕಾರ್ಯನಿರ್ವಾಹಕ ಅಭಿಯಂತರರು, ಪಂ.ರಾ.ಇಂ. ವಿಭಾಗ, ಬೀದರ.
ವಾ.ಸಾ.ಸಂ.ಇ/ಬೀದರ/30/ಕೆ.ಎಸ್.ಎಂ.ಸಿ.&ಎ/2026–27

ಕರ್ನಾಟಕ ಸರ್ಕಾರ
ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ಕಛೇರಿ, ಪಿ.ಎಂ ಪೋಷಣ್ ಶಕ್ತಿ ನಿರ್ಮಾಣ್ (ಮ.ಉ.ಯೋ) ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ.
email: eokodagumms@gmail.com
ಅದಾ:ಆಹಾರ ಸಾಗಾಣಿಕೆ ಟೆಂಡರ್/11/2025–26 ದಿನಾಂಕ:06.05.2026

ಆಹಾರ ಸಾಗಾಣಿಕೆ ಟೆಂಡರ್ e-procurement ಪ್ರಕಟಣೆ

ಕೊಡಗು ಜಿಲ್ಲೆಯ ಮೂರು ತಾಲ್ಲೂಕುಗಳ ಕೆ.ಎಫ್.ಸಿ.ಎಸ್.ಸಿ ಗೋದಾಮಿನಿಂದ ಅಕ್ಕಿ, ಗೋಧಿ, ತೊಗರಿಬೇಳೆ, ಸೂರ್ಯಕಾಂತಿ ಎಣ್ಣೆ ಆಹಾರ ಸಾಮಾಗ್ರಿಗಳನ್ನು ಆಯಾ ತಾಲ್ಲೂಕುಗಳ ಸರ್ಕಾರಿ ಮತ್ತು ಅನುದಾನಿತ ಶಾಲಾ ಅಡುಗೆ ಕೇಂದ್ರಗಳಿಗೆ ಸರಬರಾಜು ಮಾಡಲು ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿರವರಿಂದ ತಾಲ್ಲೂಕುವಾರು ಟೆಂಡರ್‌ಗಳನ್ನು e-procurement ಮೂಲಕ ಆಹ್ವಾನಿಸಲಾಗಿದೆ. (www.kppp.karnataka.gov.in) ಆಸಕ್ತಿಯುಳ್ಳವರು ಆರ್.ಸಿ ಹೊಂದಿದ (ಆರ್.ಟಿ.ಓ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ) ಲಾರಿ ಮಾಲಿಕರು, ಟೆಂಡರ್ ಹಾಕಲು ಇಚ್ಚೆ ಉಳ್ಳವರು KPPP portal ರಲ್ಲಿ ತಿಳಿಸಿದಂತೆ Tender Processing Fee ಯನ್ನು ಆನ್‌ಲೈನ್ ಮೂಲಕ ಸಲ್ಲಿಸತಕ್ಕದ್ದು, ಹೆಚ್ಚಿನ ವಿವರಗಳಿಗಾಗಿ www.eproc.karnataka.gov.in ಮೂಲಕ ಮಾಹಿತಿಯನ್ನು ಪಡೆಯಬಹುದಾಗಿದೆ.

1	ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ	ದಿನಾಂಕ:11.05.2026ರ ಬೆಳಗ್ಗೆ 10.30 ರಿಂದ
2	e-Tender ಸಲ್ಲಿಸಲು ಕೊನೆಯ ದಿನಾಂಕ	ದಿನಾಂಕ: 25.05.2026ರ ಸಂಜೆ 05.30 ಗಂಟೆ
3	ತಾಂತ್ರಿಕ ಬಿಡ್ ತೆರೆಯುವ ದಿನಾಂಕ	ದಿನಾಂಕ:27.05.2026 ರ ಬೆಳಿಗ್ಗೆ 11.30 ಗಂಟೆ
4	ಆರ್ಥಿಕ ಬಿಡ್ ತೆರೆಯುವ ದಿನಾಂಕ	ದಿನಾಂಕ:29.05.2026 ರ ಬೆಳಿಗ್ಗೆ 11.30 ಗಂಟೆ

ಕ್ರ. ಸಂ	ತಾಲ್ಲೂಕು	ಅಡುಗೆ ಕೇಂದ್ರಗಳ ಸಂಖ್ಯೆ	ಇ.ಎಂ.ಡಿ ಮೊತ್ತ (ರೂ.ಗಳಲ್ಲಿ)
1	ಮಡಿಕೇರಿ	128	9350/–
2	ವಿರಾಜಪೇಟೆ	152	14625/–
3	ಸೋಮವಾರಪೇಟೆ	174	13800/–

ಹೆಚ್ಚಿನ ವಿವರಗಳಿಗೆ www.kppp.karnataka.gov.in KPPP portal ಅಥವಾ ಶಿಕ್ಷಣಾಧಿಕಾರಿಗಳು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ರವರ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು.

ಸಹಿ/– ಶಿಕ್ಷಣಾಧಿಕಾರಿಗಳು,
ಪಿ.ಎಂ.ಪೋಷಣ್ ಶಕ್ತಿ ನಿರ್ಮಾಣ್ (ಮ.ಉ.ಯೋ)
ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ

ಕರ್ನಾಟಕ ಸರ್ಕಾರ – ಕರ್ನಾಟಕ ಅರಣ್ಯ ಇಲಾಖೆ
ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ, ಶಿವಮೊಗ್ಗ ವಿಭಾಗ, ಶಿವಮೊಗ್ಗ
ಪ್ರಾದೇಶಿಕ ವಿಭಾಗ ಕಛೇರಿ ಡಿ.ಸಿ ಕಾಂಪೌಂಡ್, ಶಿವಮೊಗ್ಗ–577201
phone:08182-272210 FAX No: 08182-22565 EmailID: dcf.shivamoga@gmail.com
ಸಂಖ್ಯೆ: ಬಿ2/ಲಾಗಿಂಗ್/ಇ–ಹರಾಜು/ಆಲ್ಕೋಳ/ಸಿಆರ್–28/ ದಿನಾಂಕ: 28.04.2026

ಅರಣ್ಯ ಉತ್ಪನ್ನಗಳ ಇ–ಹರಾಜಿಗೆ ಸಂಬಂಧಪಟ್ಟ ಟೆಂಡರ್ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಶಿವಮೊಗ್ಗ ವಿಭಾಗದ ಸರ್ಕಾರಿ ನಾಟಾ ಸಂಗ್ರಹಾಲಯ, ಆಲೋಳ, ಶಿವಮೊಗ್ಗ ಇಲ್ಲಿ ದಾಸ್ತಾನು ಇರುವ ನಾಟಾ/ ಸೌದೆ/ ಬಿಲ್ಲೇಟ್/ ಪೋಲ್ಸ್ ಗಳನ್ನು ದಿನಾಂಕ: 30–05–2026 ರಂದು ಇ–ಹರಾಜು ಮೂಲಕ ವಿಲೇವಾರಿ ಮಾಡಲು ದಿನಾಂಕವನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಹರಾಜಿನಲ್ಲಿ ಈ ಕಛೇರಿಯ ಸವಿಸ್ತಾರ ಹರಾಜು ಪುಕಟಣೆ ಸಂಖ್ಯೆ: ಬಿ2/ಲಾಗಿಂಗ್/ಇ–ಹರಾಜು/ಆಲ್ಕೋಳ/ಸಿಆರ್–28/2025–26 ದಿನಾಂಕ: 28–04–2026 ರಲ್ಲಿ ತಿಳಿಸಿರುವ ಷರತ್ತಿಗೊಳಪಟ್ಟು ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಇ ಹರಾಜಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ವೇಳೆಯಲ್ಲಿ ಈ ಕಛೇರಿಯಲ್ಲಿ ಸಂಪರ್ಕಿಸಬಹುದಾಗಿರುತ್ತದೆ.ಹಾಗೂ ಇ–ಹರಾಜಿನ ಕುರಿತು ವಿವರಗಳನ್ನು ಕರ್ನಾಟಕ ಸರ್ಕಾರದ ಅಧಿಕೃತ ವೆಬ್‌ಸೈಟ್ www.etimber.in www.mstcecommerce.com ಮೂಲಕ ಪಡೆದುಕೊಳ್ಳಬಹುದಾಗಿರುತ್ತದೆ.

ಇ–ಹರಾಜಿಗೆ ಇಟ್ಟಿರುವ ಅರಣ್ಯ ಉತ್ಪನ್ನಗಳ ವಿವರ

ಕ್ರ ಸಂ	ಉಗ್ರಾಣದ ಹೆಸರು	ಉತ್ಪನ್ನಗಳ ವಿವರ		ಲಾಟ್ ಸಂಖ್ಯೆ	ಅಂದಾಜು ಪ್ರಮಾಣ (ಎಂ3 ಗಳಲ್ಲಿ)	ದಿನಾಂಕ ಮತ್ತು ಸೆಷನ್ಸ್
1	ಜಿ.ಟಿ.ಡಿ ಆಲ್ಕೋಳ ಶಿವಮೊಗ್ಗ	ಅಕೇಶಿಯಾ	ನಾಟಾ	120	6819-1173.277	30.05.2026 4 ession
2		ಅಕೇಶಿಯಾ ಸ್ಪಿಂಗ್ ವೆಲ್	ನಾಟಾ	05	7=1.353	
3		ಬೀಟೆ	ನಾಟಾ	51	253=20.329	
4		ಸಾಗುವಾನಿ	ನಾಟಾ	105	835=46.873	
5		ಇತರೆ ಜಾತಿ	ನಾಟಾ	148	375=93.488	
6		ಅಕೇಶಿಯಾ	ಸೈಜಸ್	01	5=0.055	
7		ಬೀಟೆ	ಸೈಜಸ್	03	28=1.340	
8		ಸಾಗುವಾನಿ	ಸೈಜಸ್	12	85=2.764	
9		ಇತರೆ ಜಾತಿ	ಸೈಜಸ್	03	20=0.383	
10		ಅಕೇಶಿಯಾ	ಪೋಲ್ಸ್	14	278 ಸಂಖ್ಯೆ	
11		ಅಕೇಶಿಯಾ ಸ್ಪಿಂಗ್ ವೆಲ್	ಪೋಲ್ಸ್	01	03 ,ಸಂಖ್ಯೆ	
12		ಬೀಟೆ	ಪೋಲ್ಸ್	01	04 ,ಸಂಖ್ಯೆ	
13		ಸಾಗುವಾನಿ	ಪೋಲ್ಸ್	14	229 ಸಂಖ್ಯೆ	
14		ಇತರೆ ಜಾತಿ	ಪೋಲ್ಸ್	06	325ಸಂಖ್ಯೆ	
15		ಅಕೇಶಿಯಾ	ಬಿಲ್ಲೇಟ್ಸ್	03	32.506	
16		ಬೀಟೆ	ಬಿಲ್ಲೇಟ್ಸ್	03	1.848	
17		ಸಾಗುವಾನಿ	ಬಿಲ್ಲೇಟ್ಸ್	04	1.061	
18		ಎನ್.ಟಿ.ಎಫ್.ಪಿ	–	01	60 ಸಂಖ್ಯೆ	
		ಒಟ್ಟು ಲಾಟ್ ಸಂಖ್ಯೆ		495		

ಸಹಿ/– ಉಪ ಅರಣ್ಯ ಸಂರಕ್ಷಣಾಧಿಕಾರಿ, ಶಿವಮೊಗ್ಗ ವಿಭಾಗ, ಶಿವಮೊಗ್ಗ.
ವಾ.ಸಾ.ಸಂ.ಇ/ಕೆಎಸ್ಎಂಸಿಎ/ಶಿ/26–27/35/05/204

ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ
ಬೆಳಗುಂಬ ರಸ್ತೆ, ತುಮಕೂರು – 572103 ಫ್ಯಾಕ್ಸ್ : 0816–2255761 ದೂರವಾಣಿ : 2272280
website: tumakuru.uda.gov.in, email: tudatmk2009@yahoo.co.in
ಕ್ರಮಾಂಕ ಟಿಯುಡಿಎ/ಸಮುದಾಯ ಭವನ/ಇ–ಹರಾಜು/01/2026–27 ದಿನಾಂಕ : 07–05–2026

ಇ–ಹರಾಜು ಪ್ರಕಟಣೆ

ಮರಳೂರು ಸರ್ವೆ ನಂಬರ್‌ನಲ್ಲಿ ನಿರ್ಮಿಸಿರುವ ಸಮುದಾಯ ಭವನದ ನಿರ್ವಹಣೆಗೆ ಇ–ಹರಾಜು ಪ್ರಕಟಣೆ

1)	ಇ–ಹರಾಜಿನ ಪ್ರಕ್ರಿಯೆಯು ಪ್ರಾರಂಭವಾಗುವ ದಿನಾಂಕ	:	ದಿನಾಂಕ : 07–05–2026
2)	ಇ–ಹರಾಜಿನಲ್ಲಿ ಪಾಲ್ಗೊಳ್ಳಲು ಪ್ರೋಸೆಸಿಂಗ್ ಶುಲ್ಕ ಮತ್ತು ಇ.ಎಂ.ಡಿ ಪಾವತಿಸುವ ಕೊನೆಯ ದಿನಾಂಕ ಹಾಗೂ ಸಮಯ	:	ದಿನಾಂಕ : 21–05–2026 ಸಾಯಂಕಾಲ : 5.00 ಗಂಟೆವರೆಗೆ
3)	ಇ–ಹರಾಜಿನಲ್ಲಿ ಬಿಡ್ ಮಾಡುವ ಸಮಯ	:	ದಿನಾಂಕ : 22–05–2026 ರ ಬೆಳಿಗ್ಗೆ 10.00 ಗಂಟೆಯಿಂದ ಸಾಯಂಕಾಲ 5.00 ಗಂಟೆಗೆ ಮುಕ್ತಾಯಗೊಳ್ಳುತ್ತದೆ. (ಡೆಲ್ಟಾ ಟೈಮ್ 0.05.00 ನಿಮಿಷ)

ತುಮಕೂರು ನಗರದ ಕುಣಿಗಲ್ ರಸ್ತೆ ಹಾಗೂ ರಿಂಗ್ ರಸ್ತೆಗೆ ಹೊಂದಿಕೊಂಡಂತೆ ಇರುವ ಪ್ರಾಧಿಕಾರದಿಂದ ರಚಿಸಿರುವ ಮರಳೂರು ಸರ್ವೆ ನಂಬರ್‌ನಲ್ಲಿ ನಿರ್ಮಿಸಲಾಗಿರುವ ಸಮುದಾಯ ಭವನವನ್ನು ಬಾಡಿಗೆ ನೀಡುವ ಬಗ್ಗೆ.

ಕ್ರ ಸಂ	ಸ್ಥಳ	ವಿಸ್ತೀರ್ಣ ಚ.ಮೀ. ಗಳಲ್ಲಿ	ಕನಿಷ್ಠ ಮಾಸಿಕ ಪ್ರೀಮಿಯಂ ರೂ. ಗಳಲ್ಲಿ	ಪಾವತಿಸ ಬೇಕಾಗಿರುವ. ಇ.ಎಂ.ಡಿ. ಮೊತ್ತ ರೂ. ಗಳಲ್ಲಿ	ಪಾವತಿಸಬೇಕಾದ ಠೇವಣಿ ಮೊಬಲಗು ರೂ. ಗಳಲ್ಲಿ
1	ಮರಳೂರು ಸಮುದಾಯ ಭವನ	ಕೆಳ ಮಹಡಿ 6804 ಚ.ಅ ನೆಲಮಹಡಿ 6410 ಚ.ಅ 1ನೇ ಮಹಡಿ 4256 ಚ.ಅ ಹಾಗೂ ಪಾರ್ಕಿಂಗ್ ಸ್ಥಳ: 13000 ಚ.ಅ	3,00,000	6,48,000	21,60,000

ವೆಬ್‌ಸೈಟ್ : kppp.karnataka.gov.in ಹಾಗೂ **website:tumakuru.uda.gov.in** ನಲ್ಲಿ ಇ–ಹರಾಜಿನ ಸಂಬಂಧ ಷರತ್ತು, ನಿಯಮ, ನಿಬಂಧನೆಗಳ ವಿವರಗಳನ್ನು ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ವೇಳೆಯಲ್ಲಿ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ ಮತ್ತು ಇ–ಹರಾಜಿಗೆ ಸಂಬಂಧಿಸಿದಂತೆ ಯಾವುದಾದರೂ ಬದಲಾವಣೆ ಇದ್ದಲ್ಲಿ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು, ಯಾವುದೇ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗುವುದಿಲ್ಲ.

ಸಹಿ/– (ಶುಭ ಕಲ್ಯಾಣ್) ಭಾ.ಆ.ಸೇ., ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು
ಸಹಿ/– (ಉಮೇಶ್‌ಚಂದ್ರ ಎನ್.ಆರ್.) ಕೆ.ಎ.ಎಸ್., ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು
DIPR/TUM/RO-26/26-27/Oysters